ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 280 RNI Number : KNKAN/25/A2770 24-10-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:280 ರಾಯಚೂರು 24-10-2026 ಶನಿವಾರ ಪುಟ 04 ಬೆಲೆ ರೂ.2/- Postal Reg Number:RCR/L/RNP/117/2026-28

ಶಿಕ್ಷಕರ- ಪದವೀಧರ ಕ್ಷೇತ್ರದ ಚುನಾವಣೆ ಶಾಂತಿಯುತ ಮತದಾನ

ಬೆಂಗಳೂರು,ಅ.23- ಆಡಳಿತಾರೂಢ ಕಾಂಗ್ರೆಸ್ ಹಾಗೂ ಎನ್‌ಡಿಎ ಮೈತ್ರಿಕೂಟದ ನಡುವೆ ತೀವ್ರ ಪೈಪೋಟಿಗೆ ಕಾರಣವಾಗಿರುವ ವಿಧಾನ ಪರಿಷತ್ತಿನ ಎರಡು ಶಿಕ್ಷಕರ ಹಾಗೂ ಎರಡು ಪದವೀಧರ ಕ್ಷೇತ್ರಗಳ ಚುನಾವಣೆಯ ಮತದಾನ ಇಂದು ಬೆಳಿಗ್ಗೆ ಆರಂಭವಾಗಿದ್ದು, ಬಹುತೇಕ ಶಾಂತಿಯುತ ಹಾಗೂ ಬಿರುಸಿನ ಮತದಾನವಾಗುತ್ತಿದೆ.

ಮೋಡ ಕವಿದ ವಾತಾವರಣದ ನಡುವೆ ಶಿಕ್ಷಕರ, ಪದವೀಧರ ಮತದಾರರು ಬೆಳಿಗ್ಗೆಯಿಂದ ಮತಗಟ್ಟೆಗಳಿಗೆ ಬಂದು ಸರದಿ ಸಾಲಿನಲ್ಲಿ ನಿಂತು ತಮ ತಮ ಮತ ಚಲಾಯಿಸುತ್ತಿದ್ದ ದೃಶ್ಯ ಎಲ್ಲೆಡೆ ಸಾಮಾನ್ಯವಾಗಿ ಕಂಡುಬಂದಿತು.

ಮಾಜಿ ಉಪ ಸಭಾಪತಿ ಪುಟ್ಟಣ್ಣ, ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ.ನಮೋಶಿ, ಸಂಕನೂರ, ಬೆಂಗಳೂರು ವಕೀಲರ ಸಂಘದ ಮಾಜಿ ಅಧ್ಯಕ್ಷ ಎ.ಪಿ.ರಂಗನಾಥ ಸೇರಿದಂತೆ 43 ಅಭ್ಯರ್ಥಿಗಳ ಭವಿಷ್ಯವನ್ನು ಶಿಕ್ಷಕರ ಹಾಗೂ ಪದವೀಧರ ಮತದಾರರು ಬರೆದಿದ್ದಾರೆ. ಅ.27ರಂದು ನಾಲ್ಕು ಕ್ಷೇತ್ರಗಳ ಮತ ಎಣಿಕೆ ನಡೆಯಲಿದ್ದು, ಅಂದು ಸಂಜೆ ವೇಳೆಗೆ ಫಲಿತಾಂಶ ಪ್ರಕಟವಾಗುವ ಸಾಧ್ಯತೆಗಳಿವೆ.

ಬೆಂಗಳೂರು ಶಿಕ್ಷಕರ, ಈಶಾನ್ಯ ಶಿಕ್ಷಕರ, ಪಶ್ಚಿಮ ಪದವೀಧರ ಹಾಗೂ ಆಗ್ನೇಯ ಪದವೀಧರ ಕ್ಷೇತ್ರಗಳ ವ್ಯಾಪ್ತಿಯ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿನ ಮತದಾನ ಕೇಂದ್ರಗಳಲ್ಲಿ ಇಂದು ಬೆಳಿಗ್ಗೆ 8 ಗಂಟೆಯಿಂದ ಮತದಾನ ಪ್ರಾರಂಭವಾಗಿದ್ದು, ಸಂಜೆ ನಾಲ್ಕು ಗಂಟೆಯವರೆಗೆ ನಡೆಯಲಿದೆ. ಮುಕ್ತ ಹಾಗೂ ನ್ಯಾಯ ಸಮತ ಮತದಾನಕ್ಕೆ ಅನುಕೂಲವಾಗುವಂತೆ ಚುನಾವಣಾ ಆಯೋಗ ಸೂಕ್ತ ಪೊಲೀಸ್ ಭದ್ರತೆ ಒದಗಿಸಿದೆ. ಈ ಚುನಾವಣೆಯಲ್ಲಿ ಪ್ರಾಶಸ್ತ್ಯದ ಮತವಾಗಿರುವುದರಿಂದ ಮತಪತ್ರಗಳನ್ನು ಬಳಸಲಾಗಿದೆ.

ಕಳೆದ ಲೋಕಸಭೆ ಚುನಾವಣೆಯಂತೆ ವಿಧಾನ ಪರಿಷತ್ತಿನ ಈ ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಮೈತ್ರಿ ಮಾಡಿಕೊಂಡು ತಮ ತಮ ಅಭ್ಯರ್ಥಿಗಳನ್ನು ಸ್ಪರ್ಧೆಗಿಳಿಸಿವೆ. ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಜೆಡಿಎಸ್ ಅಭ್ಯರ್ಥಿ ಸ್ಪರ್ಧಿಸಿದ್ದರೆ, ಉಳಿದ ಮೂರು ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ.

ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಮಾಜಿ ಉಪ ಸಭಾಪತಿ ಪುಟ್ಟಣ್ಣ, ಜೆಡಿಎಸ್‌ನಿಂದ ಎ.ಪಿ.ರಂಗನಾಥ ಸೇರಿದಂತೆ ಒಟ್ಟು ಆರು ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ. ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಶರಣಪ್ಪ ಮಟ್ಟೂರು, ಬಿಜೆಪಿಯಿಂದ ಶಶೀಲ್ ಜಿ.ನಮೋಶಿ ಸೇರಿದಂತೆ ಒಟ್ಟು 13 ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ.

ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಶಶಿ ಹುಲಿಕುಂಟೆಮಠ್, ಬಿಜೆಪಿಯಿಂದ ಕೆ.ಎಂ.ಸುರೇಶ ಅವರು ಸೇರಿದಂತೆ 10 ಅಭ್ಯರ್ಥಿಗಳು ಸ್ಪರ್ಧೆಯಲ್ಲಿದ್ದಾರೆ. ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಮೋಹನ ಲಿಂಬಿಕಾಯಿ, ಬಿಜೆಪಿಯಿಂದ ಸಂಕನೂರ ಎಸ್.ವಿ. ಸೇರಿದಂತೆ ಒಟ್ಟು 14 ಅಭ್ಯರ್ಥಿಗಳು ಚುನಾವಣಾ ಕಣದಲ್ಲಿದ್ದಾರೆ.

ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ.ಗೌಡ, ಸಂಕನೂರ ಎಸ್.ವಿ., ಶಶೀಲ್ ಜಿ.ನಮೋಶಿ, ಪುಟ್ಟಣ್ಣ ಅವರು ನವೆಂಬರ್ 11ರಂದು ವಿಧಾನ ಪರಿಷತ್ ಸದಸ್ಯ ಸ್ಥಾನದಿಂದ ನಿವೃತ್ತಿಯಾಗಲಿದ್ದು, ನಿವೃತ್ತಿಯಿಂದ ತೆರವಾಗುವ ಸ್ಥಾನಗಳಿಗೆ ಚುನಾವಣಾ ಆಯೋಗ ಚುನಾವಣೆ ನಡೆಸುತ್ತಿದೆ. ಅಕ್ಟೋಬರ್ 31ರೊಳಗೆ ಚುನಾವಣಾ ಪ್ರಕ್ರಿಯೆ ಮುಕ್ತಾಯವಾಗಲಿದ್ದು, ಚುನಾವಣಾ ನೀತಿ ಸಂಹಿತೆಯು ಅಂತ್ಯಗೊಳ್ಳಲಿದೆ.

ಕಾಂಗ್ರೆಸ್-ಬಿಜೆಪಿ ಕಾರ್ಯಕರ್ತರ ನಡುವೆ ಗಲಾಟೆ

ನಾಗರಬಾವಿಯ ಅಂಬೇಡ್ಕರ್ ಕಾಲೇಜು ಮತಗಟ್ಟೆ ಸಮೀಪ ಕಾಂಗ್ರೆಸ್ ಮತ್ತು ಬಿಜೆಪಿ ಕಾರ್ಯಕರ್ತರ ನಡುವೆ ಗಲಾಟೆ ನಡೆದಿದೆ. ಮತಗಟ್ಟೆ ಸಮೀಪ ಎರಡು ಪಕ್ಷದ ಕಾರ್ಯಕರ್ತರು,ಮುಖಂಡರು ಜಮಾಯಿಸಿದ್ದರು. ಕೊಟ್ಟಿಗೆಪಾಳ್ಯದ ಮಾಜಿ ಪಾಲಿಕೆ ಸದಸ್ಯ,ಕಾಂಗ್ರೆಸ್‌ನ ಮೋಹನ್ ಕುಮಾರ್ ಹಾಗೂ ಬಿಜೆಪಿ ಮುಖಂಡರ ನಡೆವೆ ಪ್ರಚಾರದ ವೇಳೆ ಮಾತಿನ ಚಕಮಕಿ ನಡೆದಿದೆ.

ಶಾಸಕ ಮುನಿರತ್ನ ಅವರು ಸ್ಥಳಕ್ಕೆ ಬಂದ ನಂತರ ಎರಡೂ ಪಕ್ಷಗಳ ಕಾರ್ಯಕರ್ತರ ನಡುವೆ ವಾಗ್ವಾದ ತೀವ್ರಗೊಂಡು ಗಲಾಟೆಯ ಜೋರಾಗಿದೆ. ಪರಿಸ್ಥಿತಿ ಉದ್ವಿಗ್ನಗೊಂಡ ಹಿನ್ನೆಲೆಯಲ್ಲಿ ಸ್ಥಳಕ್ಕೆ ಧಾವಿಸಿದ ಪೊಲೀಸರು ಮಧ್ಯಪ್ರವೇಶಿಸಿ ಎರಡೂ ಪಕ್ಷಗಳ ಕಾರ್ಯಕರ್ತರನ್ನು ಚದುರಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ.

ಬೆಂಗಳೂರು ಶಿಕ್ಷಕರ ಕ್ಷೇತ್ರ ಬರುವ ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಈ ಮತಗಟ್ಟೆಯಲ್ಲಿ ಸದ್ಯ ಶಾಂತಿಯುತವಾಗಿ ಮತದಾನ ನಡೆಯುತ್ತಿದೆ .

ಕರ್ನಾಟಕ ರಾಜ್ಯೋತ್ಸವ ದಿನದಂದು ಬೆಂಗಳೂರು-ಮುಂಬೈ ವಂದೇ ಭಾರತ್ ಸ್ಲೀಪರ್ ಎಕ್ಸ್‌ಪ್ರೆಸ್ ಸಂಚಾರಕ್ಕೆ ಚಾಲನೆ?

ರಾಯಚೂರು: ನೈಋತ್ಯ ರೈಲ್ವೆ ಇಲಾಖೆಯು ಬೆಂಗಳೂರು-ಮುಂಬೈ ವಂದೇ ಭಾರತ್ ಸ್ಲೀಪರ್ ಎಕ್ಸ್ಪ್ರೆಸ್ನ ಸಂಚಾರದ ಉದ್ಘಾಟನಾ ಸಮಾರಂಭ ನವೆಂಬರ್ 1 ಅನ್ನು ಪ್ರಸ್ತಾಪಿಸಿದೆ ಎಂದು ರೈಲ್ವೆ ಸಲಹಾ ಸಮಿತಿ ಮಾಜಿ ಸದಸ್ಯ ಡಾ.ಬಾಬುರಾವ್ ತಿಳಿಸಿದ್ದಾರೆ.



ಈ ಹೊಸ ರೈಲು 16 ಹವಾನಿಯಂತ್ರಿತ ಬೋಗಿಗಳನ್ನು ಹೊಂದಿರಲಿದ್ದು, ಒಟ್ಟು 823 ಬರ್ತ್‌ಗಳ ಸಾಮರ್ಥ್ಯವನ್ನು ಹೊಂದಿರುತ್ತದೆ ಎಂದು ಹೇಳಲಾಗಿದೆ.

ಪ್ರಸ್ತಾವಿತ ಪ್ರಯಾಣದ ಅವಧಿ ಸುಮಾರು 16 ಗಂಟೆಗಳು, ಇದು ಅಸ್ತಿತ್ವದಲ್ಲಿರುವ ಉದ್ಯಾನ ಎಕ್ಸ್‌ಪ್ರೆಸ್ ಸುಮಾರು 24 ಗಂಟೆಗಳ ಪ್ರಯಾಣಕ್ಕೆ ಹೋಲಿಸಿದರೆ ಕಡಿಮೆಯಾಗಿದೆ ಎಂದಿದ್ದಾರೆ.

ಆದರೆ ನವೆಂಬರ್ 1 ಕೇವಲ ಪ್ರಸ್ತಾವಿತ ಉದ್ಘಾಟನಾ ದಿನಾಂಕವಾಗಿದೆ. ನಿಯಮಿತ ಸೇವೆಯ ದಿನಾಂಕಗಳು, ಅಂತಿಮ ದರಗಳು ಮತ್ತು ಬುಕಿಂಗ್‌ಗಳನ್ನು ಇನ್ನೂ ಅಧಿಕೃತವಾಗಿ ಘೋಷಿಸಲಾಗಿಲ್ಲ ಎಂದು ತಿಳಿಸಿದ್ದಾರೆ.

ಬೆಂಗಳೂರು-ಮುಂಬೈ ವಂದೇ ಭಾರತ್ ಸ್ಲೀಪರ್‌ಗೆ ಮೊದಲು ದ್ವಿ-ಮಾರ್ಗ ಯೋಜನೆ ಪ್ರಸ್ತಾಪವಾಗಿತ್ತು. ಜನಪ್ರತಿಗಳು ಮತ್ತು ನಾಗರಿಕ ಹೋರಾಟಗಾರರು ಬೆಂಗಳೂರು-ಮುಂಬೈ ವಂದೇ ಭಾರತ್ ಸ್ಲೀಪರ್ ರೈಲಿಗೆ ವಿಭಜಿತ-ವೇಳಾಪಟ್ಟಿ ಕಾರ್ಯಾಚರಣೆ ಯೋಜನೆಯನ್ನು ಪ್ರಸ್ತಾಪಿಸಿ ಈ ಸೇವೆಯನ್ನು ಹುಬ್ಬಳ್ಳಿ ಮಾರ್ಗದ ಮೂಲಕ ಮತ್ತು ಕಲಬುರಗಿ ಮಾರ್ಗದ ಮೂಲಕ ಓಡಿಸುವಂತೆ ಭಾರತೀಯ ರೈಲ್ವೆಯನ್ನು ಒತ್ತಾಯಿಸಿದ್ದರು

ಪ್ರಸ್ತುತ, ಎರಡು ಮಾರ್ಗಗಳ ನಡುವೆ ಪ್ರಯಾಣದ ಸಮಯದಲ್ಲಿ ದೊಡ್ಡ ಅಸಮಾನತೆ ಇದೆ. ಕಲಬುರಗಿ ಮಾರ್ಗವು ಬೆಂಗಳೂರು-ಮುಂಬೈ ಪ್ರಯಾಣವನ್ನು 16 ಗಂಟೆಗಳ ಒಳಗೆ ಪೂರ್ಣಗೊಳಿಸಿದರೆ, ಹುಬ್ಬಳ್ಳಿ ಮತ್ತು ಬೆಳಗಾವಿ ಮಾರ್ಗವು ದೀರ್ಘ ಸುತ್ತುವಿಕೆಯಿಂದಾಗಿ 20 ಗಂಟೆಗಳಿಗಿಂತ ಹೆಚ್ಚು ಸಮಯ ತೆಗೆದುಕೊಳ್ಳುತ್ತದೆ. ಈ ಹಿನ್ನೆಲೆಯಲ್ಲಿ ನೈಋತ್ಯ ರೈಲ್ವೆ ಇಲಾಖೆಯು ಬೆಂಗಳೂರು-ಮುಂಬೈ ವಂದೇ ಭಾರತ್ ಸ್ಲೀಪರ್ ಎಕ್ಸ್ಪ್ರೆಸ್ನ ಕಲಬುರಗಿ ಮಾರ್ಗದ ಸಂಚಾರದ ಉದ್ಘಾಟನಾ ಸಮಾರಂಭ ನವೆಂಬರ್ 1 ಅನ್ನು ಪ್ರಸ್ತಾಪಿಸಿರುವುದು ಸ್ವಾಗತಾರ್ಹವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

ಉದ್ಯಾನ ಎಕ್ಸ್ ಪ್ರೆಸ್ ರೈಲಿನ ನಂತರ 28 ವರ್ಷಗಳ ತರವಾಯ ಈ

3ನೇಯ ಪುಟಕ್ಕೆ

ಅ. 26: ಪರಿಶಿಷ್ಟ ಪಂಗಡ ಶೆ. 56ರಷ್ಟು ಮೀಸಲಾತಿ ಸಂವಿಧಾನ 9ನೇ ಸೇರ್ಪಡೆಗೆ ಕಪ್ಪು ಬಟ್ಟೆ ಧರಿಸಿ ಮೌನ ಪ್ರತಿಭಟನೆ

ರಾಯಚೂರು, ಅ.23: ವಾಲ್ಮೀಕಿ ಸಮಾಜದ ಮೀಸಲಾತಿ ಹಕ್ಕುಗಳಿಗೆ ಸಂವಿಧಾನಾತ್ಮಕ ರಕ್ಷಣೆ ಒದಗಿಸಬೇಕು, ಮೀಸಲಾತಿ ಸಂಬಂಧಿತ ಆದೇಶದ ವಿರುದ್ಧ ಸರ್ವೋಚ್ಚ ನ್ಯಾಯಾಲಯದಲ್ಲಿ ವಿಶೇಷ ಅನುಮತಿ ಅರ್ಜಿ (ಎಸ್‌ಎಲ್‌ಪಿ) ಸಲ್ಲಿಸಬೇಕು ಹಾಗೂ ಶೇ.56ರಷ್ಟು ಮೀಸಲಾತಿ ಸಂವಿಧಾನದ ಒಂಬತ್ತನೇ ಅನುಸೂಚಿಗೆ ಸೇರಿಸಲು ಕ್ರಮ ಕೈಗೊಳ್ಳಬೇಕು ಎಂದು ಅಖಿಲಾಂಡ ಶ್ರೀ ಮಹರ್ಷಿ ವಾಲ್ಮೀಕಿ ನಾಯಕ ಸಮಿತಿ ಕಲ್ಯಾಣ ಕರ್ನಾಟಕ ಜಿಲ್ಲಾ ಘಟಕದ ಅಧ್ಯಕ್ಷ ವೆಂಕಟೇಶ್ ನಾಯಕ್ ಆಸ್ಕಿಹಾಳ್ ಆಗ್ರಹಿಸಿದರು.



ಅವರಿಂದು ನಗರದಸುದ್ದಿಗಾರರೊಂದಿಗೆ ಮಾತನಾಡಿ, ಅ.26ರಂದು ನಡೆಯುವ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಕೈಗೆ ಕಪ್ಪುಪಟ್ಟಿ ಧರಿಸಿ ಮೌನ ಪ್ರತಿಭಟನೆ ನಡೆಸುವಂತೆ ಕರೆ ನೀಡಿದರು.

ಜಿಲ್ಲಾಡಳಿತವು ನೀತಿ ಸಂಹಿತೆ ಹಿನ್ನೆಲೆಯಲ್ಲಿ ವಾಲ್ಮೀಕಿ ಜಯಂತಿಯನ್ನು ಸರಳವಾಗಿ ಆಚರಿಸಲು ನಿರ್ಧರಿಸಿರುವುದಕ್ಕೆ ಸಮಿತಿಯ ಬೆಂಬಲವಿದೆ. ಆದರೆ, ಸಮಾಜದ ನ್ಯಾಯಯುತ ಬೇಡಿಕೆಗಳು ಈಡೇರುವವರೆಗೆ ಹೋರಾಟ ಮುಂದುವರಿಯಲಿದೆ ಎಂದರು.

ಪರಿಶಿಷ್ಟ ಪಂಗಡದ ಮೀಸಲಾತಿ ಹೆಚ್ಚಳಕ್ಕೆ ಸೂಕ್ತ ಕಾನೂನು ರಕ್ಷಣೆ, ನಕಲಿ ಜಾತಿ ಪ್ರಮಾಣಪತ್ರಗಳ ಕುರಿತು ನಿಷ್ಪಕ್ಷಪಾತ ತನಿಖೆ, ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಹಾಗೂ ಶುಲ್ಕ ಮರುಪಾವತಿಯನ್ನು ಸಕಾಲದಲ್ಲಿ ಒದಗಿಸಬೇಕು. ಸಮಾಜದ ಅಭಿವೃದ್ಧಿಗಾಗಿ ಮೀಸಲಿಟ್ಟ ಅನುದಾನ ಪಾರದರ್ಶಕವಾಗಿ ಬಳಕೆಯಾಗಬೇಕು. ಯುವಜನರಿಗೆ ಉದ್ಯೋಗ, ಕೌಶಲ್ಯ ತರಬೇತಿ ಮತ್ತು ಸ್ವಯಂ ಉದ್ಯೋಗಕ್ಕೆ ನೆರವು ನೀಡಬೇಕು ಎಂದು ಒತ್ತಾಯಿಸಿದರು.

ವಾಲ್ಮೀಕಿ ಜಯಂತಿ ಕೇವಲ ಆಚರಣೆಯಾಗದೆ ಸಮಾಜದ ಹಕ್ಕು, ಸ್ವಾಭಿಮಾನ ಮತ್ತು ಸಾಮಾಜಿಕ ನ್ಯಾಯದ ಸಂಕೇತವಾಗಬೇಕು. ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಪ್ರಜಾಸತ್ತಾತ್ಮಕ ಹಾಗೂ ಸಂವಿಧಾನಬದ್ಧ ಹೋರಾಟ ಮುಂದುವರಿಸಲಾಗುವುದು ಎಂದು ಎಚ್ಚರಿಸಿದರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ರಾಯಚೂರು ಜಿಲ್ಲೆಯಲ್ಲಿ ಶಾಂತಿಯುತ ಮತದಾನ ಶೇ.86.02ರಷ್ಟು ಮತದಾನ: ಸಹಾಯಕ ಚುನಾವಣಾಧಿಕಾರಿ ಪೂವಿತಾ ಎಸ್

ರಾಯಚೂರು,ಅ.23-

ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ ರಾಯಚೂರು ಜಿಲ್ಲೆಯಲ್ಲಿ ಶುಕ್ರವಾರ ಶಾಂತಿಯುವಾಗಿ ಮತದಾನ ನಡೆಯಿತು. ಮತದಾನಕ್ಕಾಗಿ ಜಿಲ್ಲೆಯಲ್ಲಿ ಸ್ಥಾಪಿಸಿದ್ದ 16 ಮತಗಟ್ಟೆಗಳಲ್ಲಿ ಸುಸೂತ್ರವಾಗಿ ಮತದಾನ ನಡೆಯಿತು.



ಬೆಳಗ್ಗೆ ಎಂಟು ಗಂಟೆಗೆ ಮತದಾನ ಪ್ರಾರಂಭವಾಗುತ್ತಲೇ ಮತದಾರರು ಮತಗಟ್ಟೆಗಳಿಗೆ ಒಬ್ಬೊಬ್ಬರಾಗಿ ಬಂದು ಮತ ಚಲಾಯಿಸಲಾರಂಭಿಸಿದರು. ಬೆಳಿಗ್ಗೆ 10ರ ನಂತರ ಮತದಾನ ಚುರುಕುಗೊಂಡಿತು.

ರಾಯಚೂರಿನ ಎಪಿಎಮ್‌ಸಿ ಕಟ್ಟಡ, ಶ್ರೀಶಾರದ ಶಾಲೆ, ಬಾಲಕಿಯರ ಸರ್ಕಾರಿ ಪಿಯು ಕಾಲೇಜು, ರಾಯಚೂರು ತಾಲೂಕು ಪಂಚಾಯತ್ ಕಟ್ಟಡ, ಜಿಹೆಚ್‌ಪಿಎಸ್ ಯರಮರಸ್ ಕ್ಯಾಂಪ್, ಮಾನವಿಯ ಟಿಎಮ್‌ಸಿ ಕಚೇರಿ, ಸಿರವಾರದ ಸರ್ಕಾರಿ ಪಿಯು ಕಾಲೇಜ್, ದೇವದುರ್ಗದ ತಹಶೀಲ್ದಾರ್ ಕಚೇರಿ, ಗಬ್ಬೂರು ಗ್ರಾಮ ಪಂಚಾಯತ್, ಜಾಲಹಳ್ಳಿ ಗ್ರಾಮ ಪಂಚಾಯತ್, ಅರಕೇರಾ ಗ್ರಾಮ ಪಂಚಾಯತ್, ಲಿಂಗಸುಗೂರಿನ ತಹಶೀಲ್ದಾರ್ ಕಚೇರಿ ಹಾಗೂ ಹಟ್ಟಿ ಜೂನಿಯರ್ ಕಾಲೇಜ್, ಸಿಂಧನೂರಿನ ತಹಶೀಲ್ದಾರ್ ಕಚೇರಿ ಸೇರಿದಂತೆ ಮಸ್ಕಿಯ ಮುನ್ಸಿ ಪಾಲ್ ಕಚೇರಿಯಲ್ಲಿ ಸ್ಥಾಪಿಸಿದ್ದ ಮತಗಟ್ಟೆಗಳಲ್ಲಿ ಮತದಾರರು ಮತ ಚಲಾಯಿಸಿದರು.

ವಿವಿಧ ಮತದಾನ ಕೇಂದ್ರಗಳಿಗೆ ಜಿಲ್ಲಾಧಿಕಾರಿಗಳು ಭೇಟಿ: ಬೆಳಗ್ಗೆ 8ರ ಸುಮಾರಿಗೆ ಜಿಲ್ಲಾಧಿಕಾರಿಗಳು ರಾಯಚೂರಿನ ಎಪಿಎಮ್‌ಸಿ ಕಟ್ಟಡ, ಜಿಹೆಚ್‌ಪಿಎಸ್ ಯರಮರಸ್ ಕ್ಯಾಂಪ್, ಬಾಲಕಿಯರ ಸರ್ಕಾರಿ ಪಿಯು ಕಾಲೇಜು ಹಾಗೂ ಶ್ರೀಶಾರದ ಕನ್ಯಾಪೀಠ ಮಾಧ್ಯಮಿಕ ಪಾಠ ಶಾಲೆ ಮತದಾನ ಕೇಂದ್ರಕ್ಕೆ ಭೇಟಿ ನೀಡಿ, ಮತದಾನದ ವ್ಯವಸ್ಥೆಯನ್ನು ಖುದ್ದು ಪರಿಶೀಲನೆ ನಡೆಸಿದರು. ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ., ರಾಯಚೂರು ಡಿವೈಎಸ್ಪಿ ಶಾಂತಮೂರ್ತಿ, ರಾಯಚೂರು ಸಿಪಿಐ ಉಮೇಶ ಕಾಂಬಳೆ ಸೇರಿದಂತೆ ಚುನಾವಣಾ ಅಧಿಕಾರಿ, ಸಿಬ್ಬಂದಿಗಳು ಇದ್ದರು.

ಈ ವೇಳೆ ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮಾತನಾಡಿ, ಮತದಾರರು ಸಂಜೆ 4ಗಂಟೆಯ ಮುಂಚೆಯೇ ತೆರಳಿ ತಮ್ಮ ಮತದಾನವನ್ನು ಚಲಾಯಿಸುವಂತೆ ಮತದಾರಲ್ಲಿ ಮನವಿ ಮಾಡಿದರು.

ಮತದಾನವು ನಿಗದಿತ ಸಮಯದಂತೆ ಬೆಳಿಗ್ಗೆ 8ಗಂಟೆಗೆ ಸರಿಯಾಗಿ ಪ್ರಾರಂಭವಾಗಿದೆ. ಎಲ್ಲಾ ಪೋಲಿಂಗ್ ಪಾರ್ಟಿಗಳು ಮತ್ತು ಮೈಕ್ರೋ ಅಬ್ಸ ರ್ವರ್‌ಗಳು (ಸೂಕ್ಷ್ಮ ವೀಕ್ಷಕರು)

3ನೇಯ ಪುಟಕ್ಕೆ

ಅಬಕಾರಿ ಇನ್ಸೆಕ್ಟರ್ ಲಕ್ಷ್ಮೀದೇವಿ ಕಾರ್ಯಾಚರಣೆ 35.82 ಲೀಟರ್ ಮದ್ಯ ವಶ

ಲಿಂಗಸಗೂರು: ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರ ಚುನಾವಣೆ-2026 ರ ಮತದಾನದ ಪ್ರಯುಕ್ತ ರಾಯಚೂರು ಜಿಲ್ಲೆಯಾದ್ಯಂತ ದಿನಾಂಕ: 21-10-2026 ರಂದು ಸಾಯಂಕಾಲ 4-00 ಗಂಟೆಯಿಂದ ದಿನಾಂಕ: 23-10-2026 ರಂದು ಮಧ್ಯರಾತ್ರಿ 12-00 ಗಂಟೆಯವರೆಗೆ ಮದ್ಯ ಮಾರಾಟ ಹಾಗೂ ಮದ್ಯ ಸಾಗಾಣಿಕೆಯನ್ನು ಆದೇಶಿಸಿದ ಲಕ್ಷ್ಮೀದೇವಿ ನಿರೀಕ್ಷಕರು ಲಿಂಗಸಗೂರು ವಲಯ ರವರ ನೇತೃತ್ವದಲ್ಲಿ ಪಟ್ಟಣದಲ್ಲಿ ಗಸ್ತು ಮಾಡುತ್ತಿರುವಾಗ ಬಂದ ಖಚಿತ ಮಾಹಿತಿಯ ಮೇರೆಗೆ ಲಿಂಗಸಗೂರು ಪಟ್ಟಣದ ಕಲಬುರ್ಗಿ ಮುಖ್ಯ ರಸ್ತೆಯ ಬಸವಸಾಗರ ಕ್ರಾಸ್ ಹತ್ತಿರವಿರುವ ಕೃಷ್ಣಪ್ಪ ತಂದೆ ಶೆಟ್ಟಪ್ಪ ರಾಠೋಡ ಸಾ: ಗೋನವಾಟ ತಾಂಡಾ ಈತನ ಕೃಷ್ಣ ಸ್ಪೆಷಲ್ ಚಿಕನ್ ಮತ್ತು ಮಟನ್ ಖಾನಾವಳಿ ಮೇಲೆ ಅಬಕಾರಿ ಇನ್ಸೆ ಕ್ಟರ್ ದಾಳಿ ಮಾಡಿ ಶೋಧನೆ ಮಾಡಿದಾಗ 1) 180 ಎಂಎಲ್ ನ 81 ಟೆಟ್ರಾ ಪ್ಯಾಕೆಟ್, 2) ಹೈವರ್ಡ್ ಚಿಯರ್ಸ್ ವಿಸ್ಕಿಯ 90 ಎಂ.ಎಲ್ ನ 96 ಟೆಟ್ರಾ ಪ್ಯಾಕೆಟ್ ಗಳು, 3) ಬ್ಯಾಗ್ ಪೈಪರ್ ವಿಸ್ಕಿಯ 90 ಎಂ.ಎಲ್ ನ 59 ಟೆಟ್ರಾ ಪ್ಯಾಕ್ 4) ಒರಿಜಿನಲ್ ಚಾಯ್ಸ್ ವಿಸ್ಕಿಯ 90 ಎಂಎಲ್ ನ 81 ಟೆಟ್ರಾ ಪ್ಯಾಕ್



35.82 0 ಭಾರತೀಯ ತಯಾರಿಕ ಮದ್ಯವನ್ನು ಸಂಗ್ರಹಿಸಿಟ್ಟಿರುವುದನ್ನು ಪತ್ತೆಹಚ್ಚಿ ಆರೋಪಿಯನ್ನು ಬಂಧಿಸಿ, ಓಖಖ -2023 5 500 35(3) ಪ್ರಕಾರ ನೋಟೀಸ್ ನೀಡಿ, ಸದರಿ ಆರೋಪಿತನ ವಿರುದ್ಧ ಪ್ರಕರಣವನ್ನು ದಾಖಲಿಸಿದರು ಇದೇರೀತಿ ಪಟ್ಟಣದ ಕೆಲವು ಕಡೆಗಳಲ್ಲಿ ದಾಳಿ ನಡೆಸಲಾಗಿದೆ. ಇವರ ಈ ಕಾರ್ಯಕ್ಕೆ ಸಾರ್ವಜನಿಕರು ಸ್ಥಾಘಿಸಿದ್ದಾರೆ. ಈ ಸಂದರ್ಭದಲ್ಲಿ ಸಿಬ್ಬಂದಿಗಳಾದ ಬಸವರಾಜ ಅಬಕಾರಿ ನಿರೀಕ್ಷಕರು-1, ಶರಣಬಸಪ್ಪ ಅಬಕಾರಿ ಉಪ ನಿರೀಕ್ಷಕರು-2, ಅಮರೇಶ ವಾಹನ ಚಾಲಕ ಹಾಗೂ ಗೃಹ ರಕ್ಷಕ ಸಿಬ್ಬಂದಿಗಳು ಇದ್ದರು.

ತಿಡಿಗೋಳ ಗ್ರಾಮದಲ್ಲಿ ದಲಿತರ ಮೇಲೆ ಸವರ್ಣೀಯರಿಂದ ದೌರ್ಜನ್ಯ: ಸ್ಥಳಕ್ಕೆ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಭೇಟಿ

ಸಿಂಧನೂರು: ತಾಲೂಕಿನ ತಿಡಿಗೋಳ ಗ್ರಾಮದಲ್ಲಿ ಇತ್ತೀಚೆಗೆ ನಡೆದ ಮಾರುತೇಶ್ವರ ಜಾತ್ರೆಯ ಸಂದರ್ಭದಲ್ಲಿ ಸವರ್ಣೀಯರು ನಮ್ಮ ಮೇಲೆ ಜಾತಿ ನಿಂದನೆ ಮಾಡಿದ್ದಲ್ಲದೇ ಮನಬಂದಂತೆ ಥಳಿಸಿ ಹಲ್ಲೆ ಮಾಡಿದ್ದು, ತಪ್ಪಿತಸ್ಥರನ್ನು ಕೂಡಲೇ ಬಂಧಿಸಬೇಕು ಹಾಗೂ ನಮಗೆ ಸೂಕ್ತ ಪೊಲೀಸ್ ರಕ್ಷಣೆ ನೀಡಬೇಕು ಎಂದು ದಲಿತ ಸಮುದಾಯದ ಮುಖಂಡರು ಹಾಗೂ ಸಂತ್ರಸ್ತರು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಕೃಷ್ಣ ಶಾವಂತಗೇರಾ ಅವರನ್ನು ಆಗ್ರಹಿಸಿದರು.

ಗ್ರಾಮದಲ್ಲಿ ಗುರುವಾರ ನಡೆದ ಸಮಾಜ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ ಹಾಗೂ ದಲಿತ ಸಮುದಾಯದ ಮುಖಂಡರ ಸಭೆಯಲ್ಲಿ ಮಾತನಾಡಿದ ಗ್ರಾಮದ ನಿರುಪಾದಿ, ದ್ಯಾವಣ್ಣ ಮನ್ನಾಪುರ ಅವರು, ಕೆಲ ಸಾರ್ವಜನಿಕ ಪ್ರದೇಶದಲ್ಲಿ ಕುಳಿತಕೊಳ್ಳಲು ನಮಗೆ ಆತಂಕ ಕಾಡುತ್ತಿದೆ. ಜಾತ್ರೆಯ ದಿನ ಗಲಾಟೆ ಆದ ನಂತರ ಕೆಲ ಸವರ್ಣೀಯರು ಇಲ್ಲಿ ಕುಳಿತುಕೊಳ್ಳಬೇಡಿ ಎಂದು ಹೇಳುತ್ತಿದ್ದಾರೆ ಎಂದು ಹೇಳಿದರು.

ನಮ್ಮ ಮನೆಗಳು ಅತ್ಯಂತ ಚಿಕ್ಕದಾಗಿದ್ದು ವೈಯಕ್ತಿಕ ಶೌಚಾಲಯ ಕಟ್ಟಿಸಿಕೊಳ್ಳಲು ಜಾಗವಿಲ್ಲ, ಹೀಗಾಗಿ ಬೇರೆ ದಾರಿಯಿಲ್ಲದೇ ಬಯಲು ಬಹಿರ್ದೆಸೆಗೆ ಹೋಗುತ್ತೇವೆ. ರಾತ್ರಿ ವೇಳೆ ಬಯಲು ಬಹಿರ್ದೆಸೆಗೆ ಹೋಗುವ ಕಡೆ ಕೆಲವರು ಲೈಟ್



ಹಚ್ಚುವುದು, ಕಲ್ಲು ಎಸೆಯುವುದು ಮಾಡುತ್ತಾರೆ. ಇದರಿಂದಾಗಿ ಕಳೆದ ಕೆಲವು ದಿನಗಳಿಂದ ಬಹಿರ್ದೆಸೆಗೆ ಹೋಗಲು ತೀವ್ರ ತೊಂದರೆ ಅನುಭವಿಸುತ್ತಿದ್ದೇವೆ. ಮೊನ್ನೆ ಜಗಳ ಆದ ನಂತರ ನಮಗೆ ಭಯ ಆಗಿದೆ ಎಂದು ಗ್ರಾಮದ ಮಹಿಳೆಯರಾದ ಚಂದಮ್ಮ ಹನುಮಂತ ಹಾಗೂ ಲಕ್ಷ್ಮಮ್ಮ ಅವರು ಅಳಲು ತೋಡಿಕೊಂಡರು.

ಗ್ರಾಮ ಪಂಚಾಯಿತಿ ಪಿಡಿಒ ಜ್ಯೋತಿ ಗುಡದೂರು ಮಾತನಾಡಿ, ಈ ಏರಿಯಾದಲ್ಲಿ ಗ್ರಾಮ ಪಂಚಾಯಿತಿಯಿಂದ ಸರ್ವೆಕಾರ್ಯ ನಡೆಸಿದ್ದು, 51 ಮನೆಗಳಿವೆ. ಅದರಲ್ಲಿ 27 ಮನೆಗಳಿಗೆ ವೈಯಕ್ತಿಕ ಶೌಚಾಲಯ ಇಲ್ಲವೇ ಸುಲಭ ಶೌಚಾಲಯ ಮಾದರಿಯಲ್ಲಿ ಶೌಚಾಲಯ ನಿರ್ಮಿಸಲು ಪ್ರಸ್ತಾವನೆ ಸಲ್ಲಿಸಲಾಗುವುದು. ಶೌಚಾಲಯದ ಸಮಸ್ಯೆ ಬಗ್ಗೆ ಮಹಿಳೆಯರು ಗಮನ ಸೆಳೆದಿದ್ದು, ಈ ಹಿನ್ನೆಲೆಯಲ್ಲಿ ಸುಲಭ ಶೌಚಾಲಯ ಮಾದರಿಯಲ್ಲಿ 25 ಲಕ್ಷ ರೂಪಾಯಿ ವೆಚ್ಚದಲ್ಲಿ ಶೌಚಾಲಯ ನಿರ್ಮಿಸಲು ಅವಕಾಶ ಇದ್ದು, ಇದನ್ನು ಸ್ವಸಹಾಯ ಸಂಘಗಳ ನಿರ್ವಹಣೆ ಮಾಡಿಕೊಂಡು ಹೋಗಬೇಕಾಗುತ್ತದೆ ಎಂದು ತಿಳಿಸಿದರು.

ಶಾಶ್ವತ ಪರಿಹಾರ ಕಲ್ಪಿಸುವ ಮುನ್ನ ಆದಷ್ಟು ಬೇಗ ತಾತ್ಕಾಲಿಕವಾಗಿ ಕೂಡಲೇ ಸೂಕ್ತ ವ್ಯವಸ್ಥೆ ಕಲ್ಪಿಸುವಂತೆ ಸಮಾಜ ಕಲ್ಯಾಣ ಇಲಾಖೆ ಡಿಡಿ ಅವರು ಪಿಡಿಒ ಅವರಿಗೆ ಸೂಚಿಸಿದರು.

ದಲಿತ ಸಮುದಾಯದ ಕುಟುಂಬಗಳು ವಾಸಿಸುವ

3ನೇಯ ಪುಟಕ್ಕೆ

ವಿಧಾನಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ ವಿವಿಧ ಮತಗಟ್ಟೆ ಕೇಂದ್ರಗಳಿಗೆ ಸಿಇಒ ಈಶ್ವರ್ ಕಾಂದೂ ಭೇಟಿ ನೀಡಿ ಪರಿಶೀಲನೆ



ರಾಯಚೂರು,ಅ.23

ಕರ್ನಾಟಕ ವಿಧಾನ ಪರಿಷತ್ತಿನ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ-2026ರ ಮತದಾನ ಪ್ರಕ್ರಿಯೆಯು ಶಾಂತಿಯುತವಾಗಿ ನಡೆಯುತ್ತಿರುವ ಕುರಿತು ಪರಿಶೀಲಿಸಲು ರಾಯಚೂರು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಮಾದರಿ ನೀತಿ ಸಂಹಿತೆಯ ಜಿಲ್ಲಾ ನೋಡಲ್ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ಶುಕ್ರವಾರ ದಂದು ರಾಯಚೂರು ನಗರದ ವ್ಯಾಪ್ತಿಯಲ್ಲಿರುವ ವಿವಿಧ ಮತಗಟ್ಟೆ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಗರದ ರಾಯಚೂರು ತಾಲ್ಲೂಕು ಪಂಚಾಯಿತಿ ಕಾರ್ಯಾಲಯ, ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಮತಗಟ್ಟೆ, ಎಪಿಎಂಸಿ ಹಾಗೂ ಯರಮರಸ್ ಕ್ಯಾಂಪ್ ಪ್ರಾಥಮಿಕ ಶಾಲೆಯಲ್ಲಿ ಸ್ಥಾಪಿಸಲಾಗಿರುವ ಮತಗಟ್ಟೆ ಕೇಂದ್ರಗಳಿಗೆ ಭೇಟಿ ನೀಡಿದ ಅವರು, ಮತದಾನ ಪ್ರಕ್ರಿಯೆಯ ಕುರಿತು ಮತಗಟ್ಟೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

3ನೇಯ ಪುಟಕ್ಕೆ

ದೇಶದ ರಕ್ಷಣೆಗಾಗಿ ಹುತಾತ್ಮರಾದ ಪೊಲೀಸರ ತ್ಯಾಗ ಸದಾ ಸ್ಮರಣೀಯ: ಇಕ್ರಮ್ ಶರೀಫ್

ಕಲಬುರಗಿ:

ದೇಶದ ರಕ್ಷಣೆ ಮತ್ತು ಭದ್ರತೆಗಾಗಿ ತಮ್ಮ ಪ್ರಾಣವನ್ನೇ ಪಣಕ್ಕಿಟ್ಟು ಕರ್ತವ್ಯ ನಿರ್ವಹಿಸಿ ಹುತಾತ್ಮರಾದ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯ ತ್ಯಾಗ ಮತ್ತು ಬಲಿದಾನ ಸದಾ ಸ್ಮರಣೀಯ. ಅವರ ಸೇವೆಯನ್ನು ಗೌರವಿಸಿ, ಸ್ಮರಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಹೇಳಿದರು.



ನಗರದ ಡಿ.ಎ.ಆರ್. ಮೈದಾನದಲ್ಲಿ ಬುಧವಾರ ಕಲಬುರಗಿ ನಗರ ಹಾಗೂ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಆಯೋಜಿಸಿದ್ದ ಪೊಲೀಸ್ ಹುತಾತ್ಮರ ದಿನಾಚರಣೆಯಲ್ಲಿ ಪೊಲೀಸ್ ಹುತಾತ್ಮರ ಸ್ಮಾರಕಕ್ಕೆ ಪುಷ್ಪಗುಚ್ಛ ಸಮರ್ಪಿಸಿ ಅವರು ಮಾತನಾಡಿದರು.

ಪೊಲೀಸ್ ಇಲಾಖೆಯ ಕರ್ತವ್ಯ ಇತರ ಇಲಾಖೆಗಳಿಗಿಂತ ಭಿನ್ನ ಹಾಗೂ ಸವಾಲಿನಿಂದ ಕೂಡಿದೆ. ದಸರಾ, ದೀಪಾವಳಿ, ಈದ್, ಕ್ರಿಸ್‌ಮಸ್ ಸೇರಿದಂತೆ ಯಾವುದೇ ಹಬ್ಬವಿರಲಿ, ಸಾರ್ವಜನಿಕರು ಸಂಭ್ರಮದಿಂದ ಹಬ್ಬ ಆಚರಿಸುವ ಸಂದರ್ಭದಲ್ಲಿ ಪೊಲೀಸರು ಭದ್ರತಾ ಕರ್ತವ್ಯದಲ್ಲಿ ನಿರತರಾಗಿರುತ್ತಾರೆ. ವರ್ಷವಿಡೀ 365 ದಿನಗಳು, ವಾರದ ಏಳು ದಿನಗಳು ಹಾಗೂ ದಿನದ 24 ಗಂಟೆಗಳ ಕಾಲ ಜನರ ರಕ್ಷಣೆಗಾಗಿ ಶ್ರಮಿಸುತ್ತಾರೆ ಎಂದು ತಿಳಿಸಿದರು.

ಲಕ್ಷಾಂತರ ಜನರು ಸೇರುವ ಹಬ್ಬ, ಜಾತ್ರೆ, ಮೆರವಣಿಗೆ ಹಾಗೂ ಪ್ರತಿಭಟನೆಗಳು ಶಾಂತಿಯುತವಾಗಿ ನಡೆಯುವಲ್ಲಿ ಪೊಲೀಸರ ಪಾತ್ರ ಮಹತ್ವದ್ದಾಗಿದೆ. ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಿ, ಸಮಾಜದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವುದು ಪೊಲೀಸರ ಪ್ರಮುಖ ಜವಾಬ್ದಾರಿಯಾಗಿದೆ. ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಕೆಲವೊಮ್ಮೆ ಟೀಕೆಗಳನ್ನು ಎದುರಿಸಬೇಕಾದ ಪರಿಸ್ಥಿತಿಯೂ ಎದುರಾಗುತ್ತದೆ. ಹೀಗಾಗಿ ಪೊಲೀಸ್ ಸೇವೆಯನ್ನು ಕೆಲವರು ಕೃತಜ್ಞತೆ ದೊರೆಯದ ಸೇವೆ ಎಂದೂ ಪರಿಗಣಿಸುತ್ತಾರೆ ಎಂದು ಹೇಳಿದರು.

ಪೊಲೀಸರ ತ್ಯಾಗ ಕೇವಲ ಅವರಿಗಷ್ಟೇ ಸೀಮಿತವಾಗಿಲ್ಲ. ಅವರ ಪತ್ನಿ, ಮಕ್ಕಳು, ತಂದೆ-ತಾಯಿ ಸೇರಿದಂತೆ ಕುಟುಂಬದ ಸದಸ್ಯರೂ ಹಬ್ಬ-ಹರಿದಿನಗಳಲ್ಲಿ ಒಟ್ಟಾಗಿ ಸಮಯ ಕಳೆಯಲು ಸಾಧ್ಯವಾಗದೆ ತ್ಯಾಗ ಮಾಡುತ್ತಾರೆ. ಪೊಲೀಸರು ಹಾಗೂ ಅವರ ಕುಟುಂಬದವರ ನಿರಂತರ ಸೇವೆ, ಸಹಕಾರ ಮತ್ತು ತ್ಯಾಗದಿಂದಲೇ ಸಮಾಜದ ಜನರು ನೆಮ್ಮದಿಯಿಂದ ಬದುಕಲು ಸಾಧ್ಯವಾಗಿದೆ ಎಂದು ಜಿಲ್ಲಾಧಿಕಾರಿ ಅಭಿಪ್ರಾಯಪಟ್ಟರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಮಾತನಾಡಿ, ದೇಶಕ್ಕಾಗಿ ಪ್ರಾಣಾರ್ಪಣೆ ಮಾಡಿದ ಪೊಲೀಸ್ ಸಿಬ್ಬಂದಿಯ ತ್ಯಾಗವನ್ನು ಸ್ಮರಿಸುವ ಉದ್ದೇಶದಿಂದ ಪ್ರತಿವರ್ಷ ಅಕ್ಟೋಬರ್ 21ರಂದು ಪೊಲೀಸ್ ಹುತಾತ್ಮರ ದಿನಾಚರಣೆ ಆಚರಿಸಲಾಗುತ್ತದೆ ಎಂದರು.

1959ರಲ್ಲಿ ದೇಶದ ಉತ್ತರ ಗಡಿಯ ಲಡಾಖ್‌ನಲ್ಲಿ ತಮ್ಮ ಸಂಖ್ಯೆಗಿಂತ ಹಲವು ಪಟ್ಟು ಹೆಚ್ಚಿದ್ದ ಹಾಗೂ ಅತ್ಯಾಧುನಿಕ ಶಸ್ತ್ರಾಸ್ತ್ರಗಳನ್ನು ಹೊಂದಿದ್ದ ಚೀನಾ ಸೈನಿಕರನ್ನು ಧೈರ್ಯದಿಂದ ಎದುರಿಸಿ ಹೋರಾಡಿ ಪ್ರಾಣಾರ್ಪಣೆ ಮಾಡಿದ 10 ಮಂದಿ ಭಾರತೀಯ ಪೊಲೀಸ್ ಸಿಬ್ಬಂದಿಯ ಸ್ಮರಣಾರ್ಥ ಈ ದಿನವನ್ನು ಆಚರಿಸಲಾಗುತ್ತದೆ ಎಂದು ತಿಳಿಸಿದರು.

ದೇಶದ ಭದ್ರತೆ ಮತ್ತು ರಕ್ಷಣೆಗಾಗಿ ಪ್ರಾಣತ್ಯಾಗ ಮಾಡಿದ 154 ಹುತಾತ್ಮ ಪೊಲೀಸ್ ಸಿಬ್ಬಂದಿಯ ಹೆಸರುಗಳನ್ನು ಈ ಸಂದರ್ಭದಲ್ಲಿ ಸ್ಮರಿಸಿ, ಗೌರವ ನಮನ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಶಾಂತನು ಸಿನ್ಹಾ ಉಪಸ್ಥಿತರಿದ್ದರು. ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ. ಅಧ್ಯಕ್ಷತೆ ವಹಿಸಿದ್ದರು.

ಪೊಲೀಸ್ ಅಧಿಕಾರಿಗಳು ಹಾಗೂ ನಿವೃತ್ತ ಪೊಲೀಸ್ ಅಧಿಕಾರಿಗಳು ಹುತಾತ್ಮರ ಸ್ಮಾರಕಕ್ಕೆ ಪುಷ್ಪಗುಚ್ಛ ಸಮರ್ಪಿಸಿ ಗೌರವ ಸಲ್ಲಿಸಿದರು. ಬಳಿಕ ಹುತಾತ್ಮ ಪೊಲೀಸರ ಗೌರವಾರ್ಥ ಮೂರು ಸುತ್ತು ಗುಂಡು ಹಾರಿಸುವ ಮೂಲಕ ಶಸ್ತ್ರ ಗೌರವ ಸಲ್ಲಿಸಲಾಯಿತು.

ಡಿಸಿಪಿ ಶಾಲೂ, ಐಪಿಎಸ್ ಅಧಿಕಾರಿ ಸೌಮೇಂದು ಮುಖರ್ಜಿ, ಎಸಿಪಿ ಪ್ರವೀಣ ನಾಯಕ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಹೇಶ್ ಮೇಘಣ್ಣನವರ್ ಸೇರಿದಂತೆ ವಿವಿಧ ಪೊಲೀಸ್ ಅಧಿಕಾರಿಗಳು ಹಾಗೂ ನಿವೃತ್ತ ಪೊಲೀಸ್ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಚುನಾವಣೆ: ಕಾಂಗ್ರೆಸ್ ಅಭ್ಯರ್ಥಿ ಪರ ಭೀಮಣ್ಣ ಮೇಟಿ ಮತಯಾಚನೆ

ಯಾದಗಿರಿ:

ಕರ್ನಾಟಕ ವಿಧಾನ ಪರಿಷತ್ತಿನ ಚುನಾವಣೆಯ ಈಶಾನ್ಯ ಶಿಕ್ಷಕರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರ ಪರವಾಗಿ ಕೆಪಿಸಿಸಿ ಪ್ರಚಾರ ಸಮಿತಿ ರಾಜ್ಯ ಉಪಾಧ್ಯಕ್ಷ ಡಾ. ಭೀಮಣ್ಣ ಮೇಟಿ ಅವರು ಗುರುವಾರ ಮತಯಾಚಿಸಿದರು.

ಶಹಾಪುರದ ಡಿಡಿಯು ಶಾಲೆ, ಶಾರದಾ ವಿದ್ಯಾನಿಕೇತನ, ಏಕಲವ್ಯ ಪ್ರೌಢ ಶಾಲೆ, ಸರಕಾರಿ ಪದವಿ ಪೂರ್ವ ಕಾಲೇಜು ಮತ್ತು ಸರಕಾರಿ ಬಾಲಕ ಮತ್ತು ಬಾಲಕಿಯರ ಪ್ರೌಢ ಶಾಲೆ, ಮೊರಾರ್ಜಿ ವಸತಿ ಶಾಲೆ, ವಿಶ್ವಜ್ಯೋತಿ ಪದವಿ ಮತ್ತು ಪದವಿ ಪೂರ್ವ ಕಾಲೇಜು, ಸಂಗಮೇಶ್ವರ ಶಾಲೆ, ಖಾನಾಪುರದ ಸರಕಾರಿ ಪ್ರೌಢ ಶಾಲೆ, ದೋರನಹಳ್ಳಿಯ ಸರಕಾರಿ ಪ್ರೌಢ ಶಾಲೆ, ಶಹಾಪುರ ತಾಲ್ಲೂಕಿನ ಕೊಳ್ಳೂರು (ಎಂ) ಗ್ರಾಮದ ಸರಕಾರಿ ಪ್ರೌಢ ಶಾಲೆ, ರಸ್ತಾಪುರದ ಸರಕಾರಿ ಪ್ರೌಢ ಶಾಲೆ, ಹತ್ತಿಗೂಡುರು ಸರಕಾರಿ ಪ್ರೌಢ ಶಾಲೆ, ಯಾದಗಿರಿಯ ಡಯಟ್ ಮತ್ತು ಸರಕಾರಿ ಪದವಿ ಪೂರ್ವ ಕಾಲೇಜು ಹಾಗೂ ವಡಗೇರಾ ತಾಲೂಕಿನ ನಾಯ್ಕಲ್ ಗ್ರಾಮದ ಸರಕಾರಿ ಪ್ರೌಢ ಶಾಲೆಗಳಿಗೆ ಭೇಟಿ ನೀಡಿ ಮತಯಾಚನೆ ಮಾಡಿದರು.

ಇದೇ ವೇಳೆ ಮಾತನಾಡಿದ ಅವರು, ಶಿಕ್ಷಕರ ಏಳಿಗಾಗಿ ರಾಜ್ಯ ಸರಕಾರ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದೆ. ಇದನ್ನು ಮನಗಂಡು ಮತದಾರರು ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರನ್ನು ಬೆಂಬಲಿಸುವಂತಹ ಕೆಲಸ ಮಾಡುವುದು ಅಗತ್ಯವಿದೆ ಎಂದು ತಿಳಿಸಿದರು.

ಕಳೆದ ಆರು ವರ್ಷಗಳಿಂದಲೂ ವಿಧಾನ ಪರಿಷತ್ತಿನ ಸದಸ್ಯರಾಗಿರುವ ಶಶಿಲ್ ನಮೋಶಿ ಅವರ ಸಾಧನೆ ಶೂನ್ಯವಾಗಿದೆ. ಹೇಳಿಕೊಳ್ಳುವಂತಹ ಕೆಲಸ ಅವರು ಶಿಕ್ಷಣ ಕ್ಷೇತ್ರದಲ್ಲಿ ಒಂದೂ ಕೆಲಸ ಮಾಡಿಲ್ಲ. ಹೀಗಾಗಿಯೇ ಮತದಾರರು ಅವರಿಗೆ ತಕ್ಕ ಪಾಠ ಕಲಿಸುವಂತಹ ಕೆಲಸ ಮಾಡುವುದು ಅಗತ್ಯವಿದೆ ಎಂಬುದು ಮರೆಯಬಾರದು ಎಂದು ಹೇಳಿದರು. ಬಿಜೆಪಿ ಯಾವಾಗಲೂ ಶಿಕ್ಷಕರ ವಿರೋಧಿ ನೀತಿ ಅನುಸರಿಸುತ್ತಿದೆ. ಹೀಗಾಗಿಯೇ ಮತದಾರರು ತಕ್ಕಪಾಠ ಈ ಭಾರಿ ಕಲಿಸುವುದರಲ್ಲಿ ಯಾವುದೇ ರೀತಿಯಿಂದ ಅನುಮಾನವೇ ಇಲ್ಲ ಎಂದು ತಿಳಿಸಿದರು. ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯದರ್ಶಿ ಶ್ರೀಶೈಲ್ ಹೊಸಮನಿ, ಖಾಸಗಿ ಶಾಲಾ ಒಕ್ಕೂಟದ ಶಹಾಪುರ ತಾಲೂಕು ಅಧ್ಯಕ್ಷ ಆರ್. ಚೆನ್ನಬಸ್ಸು ವನದುರ್ಗ ಇದ್ದರು.



ಪಟಾಕಿ ಮಾರಾಟಗಾರರು ಸುರಕ್ಷತಾ ಮುನ್ನೆಚ್ಚರಿಕೆ ಪಾಲಿಸಬೇಕು : ಡಿಸಿ ಶಿಲ್ಪಾ ಶರ್ಮಾ

ಬೀದರ್ :

ಪಾಟಾಕಿ ಮಾರಾಟಗಾರರು ಕಡ್ಡಾಯವಾಗಿ ಪರವಾನಿಗೆ ನೀಡಿದ ಸ್ಥಳದಲ್ಲಿ ಮಾತ್ರ ತಾತ್ಕಾಲಿಕ ಪಟಾಕಿ ಮಾರಾಟ ಮಳಿಗೆ ಸ್ಥಾಪಿಸಬೇಕು. ಸುರಕ್ಷತಾ ಹಾಗೂ ಮುನ್ನೆಚ್ಚರಿಕಾ ಕ್ರಮಗಳನ್ನು ಪಾಲಿಸಬೇಕು. ಪರವಾನಿಗೆ ಇಲ್ಲದೇ ಬೇರೆ ಅಂಗಡಿಗಳಲ್ಲಿ ಪಟಾಕಿ ಮಾರಾಟ ಹಾಗೂ ಶೇಖರಣೆ ಮಾಡತಕ್ಕದ್ದಲ್ಲ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ತಿಳಿಸಿದರು.

ದೀಪಾವಳಿ ಹಬ್ಬದ ನಿಮಿತ್ತ ಜಿಲ್ಲೆಯಲ್ಲಿ ಪಟಾಕಿ ಮಾರಾಟಗಾರರ ಮಳಿಗೆಗಳ ಸ್ಥಾಪನೆ, ಸ್ಥಳ ಪರಿಶೀಲನೆ ಹಾಗೂ ಮುನ್ನೆಚ್ಚರಿಕೆ ಕ್ರಮ ಕುರಿತಂತೆ ನಡೆಸಿದ ಪಟಾಕಿ ಮಾರಾಟಗಾರರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಿರಾಣಿ ಅಂಗಡಿಗಳು ಮತ್ತು ಇನ್ನಿತರೆ ಸ್ಥಳಗಳಲ್ಲಿ ಪರವಾನಿಗೆ ಇಲ್ಲದೇ ಪಟಾಕಿ ದಾಸ್ತಾನು ಮಾಡುವುದನ್ನು ನಿಷೇಧಿಸಲಾಗಿದೆ. ಯಾವುದೇ ಅನಾಹುತಗಳು ಸಂಭವಿಸದಂತೆ ಕಟ್ಟುನಿಟ್ಟಿನ ಮುನ್ನೆಚ್ಚರಿಕೆ ಹಾಗೂ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಸಹಾಯಕ ಆಯುಕ್ತ ಅಭಿನವ್ ಹಾಗೂ ಅಗ್ನಿಶಾಮಕ ದಳದ ಅಧಿಕಾರಿ ಮುಜಾಮಿಲ್ ಸೇರಿದಂತೆ ವಿವಿಧ ತಾಲೂಕಿಗಳ ತಹಶೀಲ್ದಾರರು ಹಾಗೂ ಪಟಾಕಿ ಮರಾಟಗಾರರು ಪಾಲ್ಗೊಂಡಿದ್ದರು.

ನಾಲವಾರದ ಪೂಜ್ಯರ ಜನ್ಮದಿನದ ಅಂಗವಾಗಿ 155ಕ್ಕೂ ಹೆಚ್ಚು ಮಂದಿಗೆ ಉಚಿತ ಕ್ಷೌರ ಸೇವೆ

ಕಲಬುರಗಿ:

ಚಿತ್ತಾಪುರ ತಾಲೂಕಿನ ನಾಲವಾರ ಗ್ರಾಮದ ಸದ್ಗುರು ಶ್ರೀ ಕೋರಿಸಿದ್ದೇಶ್ವರ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಷ.ಬ್ರ.ಡಾ. ಸಿದ್ದ ತೋಟೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳ 62ನೇ ಜನ್ಮದಿನದ ಅಂಗವಾಗಿ ಕಲಬುರಗಿ ನಗರದ ಬಿದ್ದಾಪುರ ಕಾಲೋನಿಯಲ್ಲಿರುವ ಅನಾಥ ಮತ್ತು ನಿರ್ಗತಿಕರ ಕೇಂದ್ರದಲ್ಲಿ 155ಕ್ಕೂ ಹೆಚ್ಚು ಅನಾಥರು ಹಾಗೂ ಬೌದ್ಧಿಕ ವಿಕಲಚೇತನರಿಗೆ ಉಚಿತ ಕ್ಷೌರ ಸೇವೆ ಸಲ್ಲಿಸಲಾಯಿತು.

ಜಿಲ್ಲಾ ಹಡಪದ ಅಪ್ಪಣ್ಣ ಸಮಾಜದ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಹಾಗೂ ಸಮಾಜಸೇವಕ ಮಲ್ಲಿಕಾರ್ಜುನ ಬಿ. ಹಡಪದ ಸುಗೂರ ಎನ್. ಅವರು ಕಳೆದ 18 ವರ್ಷಗಳಿಂದ ಪೂಜ್ಯರ ಜನ್ಮದಿನದ ಅಂಗವಾಗಿ ವಿಭಿನ್ನ ಸಮಾಜಮುಖಿ ಕಾರ್ಯಗಳನ್ನು ನಡೆಸಿಕೊಂಡು ಬರುತ್ತಿದ್ದಾರೆ. ಅದರಂತೆ ಈ ವರ್ಷವೂ ಉಚಿತ ಕ್ಷೌರ ಸೇವೆ ಸಲ್ಲಿಸುವ ಮೂಲಕ ಮಾನವೀಯತೆ ಮೆರೆದರು.

ಈ ಸಂದರ್ಭದಲ್ಲಿ ಮಾತನಾಡಿದ ಪರಮಪೂಜ್ಯ ಶ್ರೀ ರಾಜಶಿವಯೋಗಿ ಮಹಾಸ್ವಾಮಿಗಳು, ''ಪೂಜ್ಯರ ಜನ್ಮದಿನದಂದು ಅನಾಥರು ಹಾಗೂ ಬೌದ್ಧಿಕ ವಿಕಲಚೇತನರಿಗೆ ಉಚಿತ ಕ್ಷೌರ ಸೇವೆ ಸಲ್ಲಿಸುವ ಮೂಲಕ ಮಲ್ಲಿಕಾರ್ಜುನ ಬಿ. ಹಡಪದ ಸುಗೂರ ಎನ್. ಅವರು ನಿಸ್ವಾರ್ಥ ಸಮಾಜಸೇವೆ ಮಾಡುತ್ತಿದ್ದಾರೆ. ಇಂತಹ ಸೇವಾ ಕಾರ್ಯಗಳು ಸಮಾಜಕ್ಕೆ ಮಾದರಿಯಾಗಿವೆ'' ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಾಗಲಿಂಗಯ್ಯ ಹಿರೇಮಠ ಮಹಾಸ್ವಾಮಿಗಳು ಹಾಗೂ ವೀರಶೈವ ಸಮಾಜದ ಮುಖಂಡರು ಮಾತನಾಡಿ, ''ಬಡ ಕುಟುಂಬದಲ್ಲಿ ಹುಟ್ಟಿ, ಬಡವರು ಹಾಗೂ ಅನಾಥರ ಸೇವೆಗೆ ತಮ್ಮನ್ನು ಸಮರ್ಪಿಸಿಕೊಂಡಿರುವ ಮಲ್ಲಿಕಾರ್ಜುನ ಬಿ. ಹಡಪದ ಸುಗೂರ ಎನ್. ಅವರ ಕಾರ್ಯ ಶ್ಲಾಘನೀಯ. ಅವರೊಂದಿಗೆ ಸೇವೆಯಲ್ಲಿ ತೊಡಗಿಸಿಕೊಂಡಿರುವ ಎಲ್ಲ ಕಾಯಕ ಬಂಧುಗಳ ಮೇಲೂ ಮಹಾಗುರುವಿನ ಆಶೀರ್ವಾದ ಸದಾ ಇರಲಿ'' ಎಂದು ಹಾರೈಸಿದರು.



ಕಲಬುರಗಿ ಜಿಲ್ಲಾ ಹಡಪದ ಅಪ್ಪಣ್ಣ ಸಮಾಜದ ಜಿಲ್ಲಾಧ್ಯಕ್ಷ ಈರಣ್ಣ ಸಿ. ಹಡಪದ ಸಣ್ಣೂರ ಮಾತನಾಡಿ, ''ನಮ್ಮ ಸಮಾಜದ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಹಾಗೂ ಸಮಾಜಸೇವಕ ಮಲ್ಲಿಕಾರ್ಜುನ ಬಿ. ಹಡಪದ ಸುಗೂರ ಎನ್. ಅವರು ಪರಮಪೂಜ್ಯ ಶ್ರೀ ಷ.ಬ್ರ. ಡಾ. ಸಿದ್ಧ ತೋಟೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳ ಜನ್ಮದಿನದ ಅಂಗವಾಗಿ ವಿವಿಧೆಡೆ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಮೆಚ್ಚುವಂತಹ ಕಾರ್ಯವಾಗಿದೆ. ಮುಂದೆಯೂ ಇಂತಹ ಹತ್ತು ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸಿ ಸಮಾಜದ ಕೀರ್ತಿಯನ್ನು ಮತ್ತಷ್ಟು ಹೆಚ್ಚಿಸಲಿ. ಗುರುವಿನ ಆಶೀರ್ವಾದ ಅವರ ಕುಟುಂಬದವರು ಹಾಗೂ ಅವರೊಂದಿಗೆ ಸೇವೆ ಸಲ್ಲಿಸುತ್ತಿರುವ ಕಾಯಕ ಸಮಾಜದ ಬಂಧುಗಳ ಮೇಲೆ ಸದಾ ಇರಲಿ'' ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ನಿರ್ಗತಿಕರ ಕೇಂದ್ರದ ವೀರೇಶ ಸ್ರ್, ಕಲಬುರಗಿ ಜಿಲ್ಲಾ ಹಡಪದ ಅಪ್ಪಣ್ಣ ಸಮಾಜದ ಗೌರವಾಧ್ಯಕ್ಷ ಬಸವರಾಜ ಹಡಪದ ಸುಗೂರ ಎನ್., ಜಿಲ್ಲಾ ಕಾರ್ಯಾಧ್ಯಕ್ಷ ಭಗವಂತ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಮೇಶ ನೀಲೂರ, ರಾಜ್ಯದ ಮಾಜಿ ಸಂಘಟನಾ ಕಾರ್ಯದರ್ಶಿ ಬಸವರಾಜ ಹಡಪದ ಶಹಾಬಾದ, ಜಿಲ್ಲಾ ಸಹಕಾರ್ಯದರ್ಶಿ ಮಹಾದೇವ ರಾವೂರ, ಕಲಬುರಗಿ ತಾಲೂಕು ಅಧ್ಯಕ್ಷ ಚಂದ್ರಶೇಖರ ತೋನಸನಹಳ್ಳಿ, ಪ್ರಧಾನ ಕಾರ್ಯದರ್ಶಿ ವಿನೋದ ಅಂಬಲಗಾ, ನಾಲವಾರ ಕಸಾಪ ಅಧ್ಯಕ್ಷ ಅಂಜುನಾಥ ಎಸ್. ನಾಯ್ಕಲ್, ಶಂಭುಲಿಂಗ ಹಡಪದ ಯಲಗೋಡ, ವಿಶ್ವನಾಥ ಹಡಪದ ಸುಗೂರ ಎನ್., ಮಲ್ಲಿಕಾರ್ಜುನ ಬೆಳಗುಪ್ಪಿ, ಶಂಕರ ಹಡಪದ ಹರವಾಳ ಸೇರಿದಂತೆ ನಿರ್ಗತಿಕರ ಕೇಂದ್ರದ ಸಿಬ್ಬಂದಿ ಉಪಸ್ಥಿತರಿದ್ದರು.

ರೈತರು ಬರದ ಭಯದಿಂದ ಆತ್ಮಸ್ಥೈರ್ಯ ಕಳೆದುಕೊಳ್ಳದಿರಿ: ನಾಲವಾರ ಶ್ರೀ



ನಾಲವಾರ,

ಕಲ್ಯಾಣ ಕರ್ನಾಟಕ ಭಾಗದ ಪ್ರಸಿದ್ಧ ಪುಣ್ಯಕ್ಷೇತ್ರ, ಭಕ್ತರ ಆರಾಧ್ಯ ಕೇಂದ್ರವಾದ ನಾಲವಾರದ ಸದ್ಗುರು ಶ್ರೀ ಕೋರಿಸಿದ್ಧೇಶ್ವರ ಮಹಾಸಂಸ್ಥಾನ ಮಠದಲ್ಲಿ ಆಯುಧಪೂಜೆಯ ಪುಣ್ಯದಿನದಂದು ಶ್ರೀಮಠದ ಪ್ರಸ್ತುತ ಪೀಠಾಧಿಪತಿಗಳಾದ ಪರಮ ಪೂಜ್ಯ ಶ್ರೀ ಡಾ. ಸಿದ್ಧತೋಟೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳ ಜನ್ಮೋತ್ಸವ ವರ್ಧಂತಿ ಮಹೋತ್ಸವ ಹಾಗೂ ಶ್ರೀಮಠದ ಹಿಂದಿನ ಗುರುಗಳಾದ ಲಿಂ.ತೋಟೇಂದ್ರ ಶಿವಯೋಗಿಗಳ ಪುಣ್ಯಸ್ಮರಣೋತ್ಸವವು ಸಹಸ್ರಾರು ಭಕ್ತರ ಜಯಘೋಷ, ಭಕ್ತಿಭಾವದ ನಡುವೆ ಅದ್ದೂರಿಯಾಗಿ ನೆರವೇರಿತು.

ಆಯುಧಪೂಜೆ ದಿನ ರಾತ್ರಿ ಲಿಂ.ತೋಟೇಂದ್ರ ಶಿವಯೋಗಿಗಳ ಪುಣ್ಯಸ್ಮರಣೋತ್ಸವದ ಅಂಗವಾಗಿ ಕರ್ತೃ ಗದ್ದುಗೆಗೆ ವಿಧಿ-ವಿಧಾನಗಳೊಂದಿಗೆ ವಿಶೇಷ ಪೂಜೆ, ರುದ್ರಾಭಿಷೇಕ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು. ಬಳಿಕ ಶ್ರೀಮಠದ ಮುಂಭಾಗದ ಆವರಣದಲ್ಲಿ ನಿರ್ಮಿಸಲಾಗಿದ್ದ ಭವ್ಯ ವೇದಿಕೆಯ ಮೇಲೆ ಡಾ. ಸಿದ್ಧತೋಟೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳ ವರ್ಧಂತಿ ಮಹೋತ್ಸವ ಕಾರ್ಯಕ್ರಮ ಜರುಗಿತು.

ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಪರಮಪೂಜ್ಯ ಡಾ.ಸಿದ್ದ ತೋಟೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು, ನಾಡು ಎದುರಿಸುತ್ತಿರುವ ಭೀಕರ ಬರಗಾಲದ ಕುರಿತು ಮಾತನಾಡಿ ರೈತರಲ್ಲಿ ಆತ್ಮಸ್ಥೈರ್ಯ ತುಂಬಿದರು.

ನಾಡಿನ ರೈತರು ಬರಗಾಲಕ್ಕೆ ಹೆದರಿ ಆತ್ಮಸ್ಥೈರ್ಯ ಕಳೆದುಕೊಳ್ಳಬಾರದು. ಭಗವಂತ ನಮ್ಮ ಜೊತೆಗಿದ್ದಾನೆ ಎಂಬ ದೃಢ ನಂಬಿಕೆಯಿಂದ ಮುನ್ನಡೆದಾಗ ಯಾವುದೇ ಆತಂಕ ಎದುರಾಗುವುದಿಲ್ಲ. ಮುಂಗಾರು ಮಳೆ ಕೈಕೊಟ್ಟು ಭೂಮಿ ಬರಡಾಗಿದೆ, ಹಿಂಗಾರಿನ ಮೂಲಕವಾದರೂ ವರುಣದೇವ ಧರೆಯನ್ನು ತಣಿಸಲಿ ಎಂದು ಎಲ್ಲರೂ ಸೇರಿ ಭಗವಂತನಲ್ಲಿ ಪ್ರಾರ್ಥನೆ ಮಾಡೋಣ ಎಂದು ಅವರು ಭಾವಪೂರ್ಣವಾಗಿ ನುಡಿದರು.

ಕಾರ್ಯಕ್ರಮದ ನೇತೃತ್ವವನ್ನು ಮುದನೂರಿನ ಶ್ರೀ ಸಿದ್ಧಚನ್ನ ಮಲ್ಲಿಕಾರ್ಜುನ ಶಿವಾಚಾರ್ಯರು, ಸೂಗೂರಿನ ಶ್ರೀ ಚನ್ನರುದ್ರಮುನಿ ಶಿವಾಚಾರ್ಯರು, ಚಟ್ನಳ್ಳಿಯ ವಿಶ್ವಾರಾಧ್ಯ ಸ್ವಾಮಿಗಳು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಯಾದಗಿರಿ ಕ್ಷೇತ್ರದ ಶಾಸಕರಾದ ಚನ್ನಾರೆಡ್ಡಿ ಪಾಟೀಲ ತುನ್ನೂರ, ಮುಖಂಡರಾದ ಸಂಗಾರೆಡ್ಡಿಗೌಡ ಮಲ್ಹಾರ, ಸಾಯಿನಾಥ್ ಇಂಜಿನಿಯರ್ ಮಹೇಶ ಸ್ವಾಮಿ ಚಿಂಚೋಳಿ, ಪ್ರದೀಪ ಪುರಾಣಿಕ, ಬೆಂಗಳೂರಿನ ಶಿವಲಿಂಗ ಭೀಮನಹಳ್ಳಿ, ಶ್ರೀಕಾಂತಗೌಡ ಮಡ್ನಾಳ ಇಬ್ರಾಹಿಮಪುರ ಮಠದ ಭಕ್ತರ ಆದ ಮಹಾದೇವ ಗಂವ್ಹಾರ ಸೇರಿದಂತೆ ಅನೇಕ ಗಣ್ಯರು, ಸುತ್ತಮುತ್ತಲಿನ ಗ್ರಾಮಗಳ ಸಹಸ್ರಾರು ಭಕ್ತರು ಪಾಲ್ಗೊಂಡು ಗುರುಗಳ ಆಶೀರ್ವಾದ ಪಡೆದರು.

ಸಮಾರಂಭದ ಆಕರ್ಷಣೆಯಾಗಿ ವೇ.ಮೂ. ಮಂಜುನಾಥ ಶಾಸ್ತ್ರಿ ನೇತೃತ್ವದ ವೈದಿಕ ತಂಡದಿಂದ ಉತ್ತರ ಭಾರತದ ಪ್ರಸಿದ್ಧ ಗಂಗಾರತಿ ಕಾರ್ಯಕ್ರಮವು ಭಕ್ತರಲ್ಲಿ ಭಕ್ತಿ ಭಾವವನ್ನು ಇಮ್ಮಡಿಗೊಳಿಸಿತು. ಮಹಾರಾಷ್ಟ್ರದ ವಾರ್ಕರಿ ಸಂಪ್ರದಾಯದ ವಿಶೇಷ ಭಜನಾ ಮೇಳದ ಭಜನಾ ಕಾರ್ಯಕ್ರಮ ವಿಶಿಷ್ಟವಾಗಿ ಮೂಡಿಬಂದಿತು. ಕು.ಈಶಾ ಪಡಶೆಟ್ಟಿ ತಂಡದವರು, ಕು. ಪ್ರತೀಕಾ ಚಿತ್ತಾಪುರ, ನಿತ್ಯಶ್ರೀ ಪಾಟೀಲ ಅವರಿಂದ ಭರತನಾಟ್ಯ ಸೇರಿದಂತೆ ಹಲವಾರು ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಶಹಾಪುರ: ಮಾತೋಶ್ರೀ ಹೇಮರೆಡ್ಡಿ ಮಲ್ಲಮ್ಮ ಬ್ಯಾಂಕ್ ಅಕ್ರಮದ ಬಗ್ಗೆ ತನಿಖೆಗೆ ಆಗ್ರಹಿಸಿ ಧರಣಿ

ಶಹಾಪುರ:

ನಗರದ ಮಾತೋಶ್ರೀ ಹೇಮರೆಡ್ಡಿ ಮಲ್ಲಮ್ಮ ಸೌಹಾರ್ದ ಬ್ಯಾಂಕ್‌ನಲ್ಲಿ ಠೇವಣಿ ಇಟ್ಟಿರುವ ಗ್ರಾಹಕರ ಹಣವನ್ನು ತಕ್ಷಣ ಮರುಪಾವತಿಸಬೇಕು ಹಾಗೂ ಬ್ಯಾಂಕ್ ನಲ್ಲಿ ನಡೆದಿದೆ ಎನ್ನಲಾದ ಹಣಕಾಸಿನ ಅಕ್ರಮದ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹಿಸಿ ಸಮಾನ ಮನಸ್ಕರ ವೇದಿಕೆಯ ವತಿಯಿಂದ ಧರಣಿ ನಡೆಯಿತು.



ಧರಣಿಯನ್ನುದ್ದೇಶಿಸಿ ಮಾತನಾಡಿದ ಸಿಪಿಎಂ ಕಾರ್ಯದರ್ಶಿ ಚನ್ನಪ್ಪ ಆನೆಗುಂದಿ, ಬ್ಯಾಂಕ್ ನಲ್ಲಿ ಸುಮಾರು 16.5 ಕೋಟಿ ರೂ.ಅಕ್ರಮ ನಡೆದಿದೆ ಎಂಬ ಆರೋಪ ಕೇಳಿಬಂದಿದೆ. ಪಿಗ್ಮಿ ಏಜೆಂಟ್ ಸಂಗಣ್ಣ ವಡ್ಡಡೋಗಿ 451 ಜನರಿಗೆ ಸಾಲ ಕೊಡಿಸುವುದಾಗಿ ನಂಬಿಸಿ, ದಾಖಲೆಗಳನ್ನು ಸೃಷ್ಟಿಸಿ, ರಶೀದಿಗಳ ಮೇಲೆ ಸಹಿ ಪಡೆದು ತಲಾ 3 ಲಕ್ಷ ರೂ. ಸಾಲ ಮಂಜೂರು ಮಾಡಿಸಿಕೊಂಡು, ಒಟ್ಟು 14.80 ಕೋಟಿ ಹಣವನ್ನು ತಮ್ಮ ಖಾತೆಗೆ ಜಮಾ ಮಾಡಿಕೊಂಡಿದ್ದಾರೆ ಎಂಬ ಆರೋಪವಿದೆ. ಈ ಕುರಿತು ಸಮಗ್ರ ತನಿಖೆ ನಡೆಸಿ ಸತ್ಯಾಸತ್ಯತೆಯನ್ನು ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.

ಸಾಮಾನ್ಯ ಜನರು ತಮ್ಮ ಜೀವನದ ಕಷ್ಟದ ಸಂಪಾದನೆಯನ್ನು ಮಕ್ಕಳ ಶಿಕ್ಷಣ, ಕುಟುಂಬ ನಿರ್ವಹಣೆ, ಆರೋಗ್ಯದ ಖರ್ಚು ಹಾಗೂ ವೃದ್ಧಾಪ್ಯದ ಭದ್ರತೆಗಾಗಿ ಬ್ಯಾಂಕ್ಗಳಲ್ಲಿ ಠೇವಣಿ ಇಡುತ್ತಾರೆ. ಆದರೆ, ತಮ್ಮದೇ ಹಣವನ್ನು ಮರಳಿ ಪಡೆಯಲು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿರುವುದು ಗ್ರಾಹಕರಲ್ಲಿ ತೀವ್ರ ಅಸಮಾಧಾನ ಮೂಡಿಸಿದೆ. ಠೇವಣಿದಾರರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಹಣ ಮರುಪಾವತಿಗೆ ಬ್ಯಾಂಕ್ ಆಡಳಿತ ಮಂಡಳಿ ಸ್ಪಷ್ಟ ಯೋಜನೆ ರೂಪಿಸಬೇಕು. ಮರುಪಾವತಿಯಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ಎಂಬುದನ್ನು ಪಾರದರ್ಶಕವಾಗಿ ತಿಳಿಸಬೇಕು ಎಂದು ಆಗ್ರಹಿಸಿದರು.

ಠೇವಣಿದಾರರ ಹಣದ ನಿರ್ವಹಣೆಯಲ್ಲಿ ಅಕ್ರಮ ನಡೆದಿದ್ದರೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಸಹಕಾರ ಇಲಾಖೆ ಅಧಿಕಾರಿಗಳು ಹಾಗೂ ಅಗತ್ಯವಿದ್ದಲ್ಲಿ ತನಿಖಾ ಸಂಸ್ಥೆಗಳು ಮಧ್ಯಪ್ರವೇಶಿಸಿ, ಠೇವಣಿದಾರರ ಹಣ ಮರುಪಾವತಿಗೆ ಕಾಲಮಿತಿ ನಿಗದಿಪಡಿಸಬೇಕು. ಕೇವಲ ಭರವಸೆ ನೀಡದೆ, ಜನರ ಕಷ್ಟದ ಸಂಪಾದನೆಯನ್ನು ಮರಳಿಸಲು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ, ಬ್ಯಾಂಕ್ ಅಧ್ಯಕ್ಷ ಬಸನಗೌಡ ಪಾಟೀಲ್ ಮರ್ಕಲ್ ಅವರ ಆತ್ಮಹತ್ಯೆ ಪ್ರಕರಣದ ಕುರಿತು ಸಿಐಡಿ ತನಿಖೆ ನಡೆಸಬೇಕು ಹಾಗೂ ಪ್ರಕರಣಕ್ಕೆ ಸಂಬಂಧಿಸಿದವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಬೇಕು ಎಂದು ಧರಣಿನಿರತರು ಆಗ್ರಹಿಸಿದರು. ಬಳಿಕ ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು. ಠೇವಣಿದಾರರ ಹಣವನ್ನು ಮರಳಿಸಿ, ಸಂಕಷ್ಟದಲ್ಲಿರುವ ಕುಟುಂಬಗಳಿಗೆ ನ್ಯಾಯ ಒದಗಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ಹಿರಿಯರಾದ ಗಿರೆಪ್ಪಗೌಡ ಬಾಣತಿಯಾಳ್, ನ್ಯಾಯವಾದಿ ಆರ್. ಚನ್ನಬಸು, ಗೌಡಪ್ಪಗೌಡ ಆಲ್ದಾಳ, ರಾಮಚಂದ್ರ, ಕಾಶಿರಾಜ್, ಎಸ್.ಎನ್. ಸಾಗ್ರ್ ಶೇಖರ್ ದೊರೆ, ಹೊನ್ನಪ್ಪ ಹೊಸ್ಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ರಾಯಚೂರು ಜಿಲ್ಲೆಯಲ್ಲಿ ಶಾಂತಿಯುತ ಮತದಾನ

ಶೇ.86.02ರಷ್ಟು ಮತದಾನ: ಸಹಾಯಕ ಚುನಾವಣಾಧಿಕಾರಿ ಪೂವಿತಾ ಎಸ್

ಸ್ಥಳದಲ್ಲಿದ್ದು, ಯಾವುದೇ ಅಹಿತಕರ ಘಟನೆಗಳು ನಡೆಯದೆ ಶಾಂತಿಯುತವಾಗಿ ಮತದಾನ ಪ್ರಕ್ರಿಯೆ ನಡೆಯುತ್ತಿದೆ ಎಂದರು.

ಮತದಾನವು ಸಂಜೆ 4 ಗಂಟೆಗೆ ಮುಕ್ತಾಯಗೊಳ್ಳಲಿದೆ. ಯಾವುದೇ ಕಾರಣಕ್ಕೂ ಸಂಜೆ 4 ಗಂಟೆಯ ನಂತರ ಮತದಾನಕ್ಕೆ ಅವಕಾಶವಿರುವುದಿಲ್ಲವಾದ್ದರಿಂದ, ಎಲ್ಲರೂ 4 ಗಂಟೆಯ ಮುಂಚೆಯೇ ಬಂದು ವೋಟ್ ಮಾಡಬೇಕು. ಗುರುವಾರ ಸಂಜೆ ದೇವದುರ್ಗ ಸೇರಿದಂತೆ ಇತರೆ ಮತಗಟ್ಟೆಗಳಿಗೆ ಭೇಟಿ ನೀಡಿ ಸಿದ್ಧತೆಗಳನ್ನು ಪರಿಶೀಲಿಸಲಾಗಿದೆ. ಆಯಾ ಭಾಗದ ಎಸಿಗಳಿಂದ ಚುನಾವಣಾ ಕಾರ್ಯವನ್ನು ನಿಗಾವಹಿಸಲು ಸೂಚಿಸಲಾಗಿದೆ ಎಂದರು.

16 ಪೋಲಿಂಗ್ ಸ್ಟೇಷನ್‌ಗಳಲ್ಲಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದ್ದು, ಅದನ್ನು ನಿರಂತರವಾಗಿ ಮಾನಿಟರ್ ಮಾಡಲಾಗುತ್ತಿದೆ. ಪ್ರತಿ ಪೋಲಿಂಗ್ ಪಾರ್ಟಿಗೂ ನಾಲ್ವರು ಸಿಬ್ಬಂದಿ ಹಾಗೂ ಮೈಕ್ರೋ ಅಬ್ಸ ರ್ವರ್‌ಗಳನ್ನು ನಿಯೋಜಿಸಲಾಗಿದೆ. ರಾಯಚೂರು ನಗರದ ಸ್ಟೇಷನ್ ರಸ್ತೆ ಮತ್ತು ಸಿಂಧನೂರಿನಲ್ಲಿ ಹೆಚ್ಚು ಮತದಾರರು ಇರುವ ಬೂತ್‌ಗಳಲ್ಲಿ, ಜನಸಂದಣಿ ಅಥವಾ ಇತರೆ ತುರ್ತು ಪರಿಸ್ಥಿತಿಗಳನ್ನು ನಿಭಾಯಿಸಲು ಹೆಚ್ಚುವರಿಯಾಗಿ ರಿಸರ್ವ್ ಪಾರ್ಟಿಗಳನ್ನು ಕೂಡ ನಿಯೋಜಿಸಲಾಗಿದೆ ಎಂದರು.

ನತರ ಜಿಲ್ಲೆಯ ವಿವಿಧ ತಾಲೂಕಿನ ಮತದಾನ ಕೇಂದ್ರಗಳಿಗೆ ಭೇಟಿ ನೀಡಲು ವಿವಿಧ ತಾಲೂಕಿಗೆ ತೆರಳಿದರು.

ಜಿಲ್ಲೆಯಲ್ಲಿ ಶೇ.86.02ರಷ್ಟು ಮತದಾನ: ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯ ಮತದಾನ ಕಾರ್ಯವು ಅಕ್ಟೋಬರ್ 23ರಂದು ರಾಯಚೂರು ಜಿಲ್ಲೆಯ ಎಲ್ಲ ಮತಗಟ್ಟೆಗಳಲ್ಲಿ ಸುಗಮವಾಗಿ ನಡೆಸಲಾಯಿತು.

ರಾಯಚೂರು ಜಿಲ್ಲೆಯಲ್ಲಿ ಒಟ್ಟು ಶೇ.86.02ರಷ್ಟು ಮತದಾನವಾಗಿದೆ ಎಂದು ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ತಿಳಿಸಿದರು.

ರಾಯಚೂರು, ದೇವದುರ್ಗ, ಸಿರವಾರ, ಮಾನವಿ, ಮಸ್ಕಿ, ಲಿಂಗಸುಗೂರು ಹಾಗೂ ಸಿಂಧನೂರು ತಾಲೂಕುಗಳಲ್ಲಿನ ಒಟ್ಟು 16 ಮತದಾನ ಕೇಂದ್ರಗಳಲ್ಲಿ ಬೆಳಗ್ಗೆ 8 ಗಂಟೆಯಿದ ಮತದಾನ ಆರಂಭವಾಗಿದೆ. ಬೆಳಗ್ಗೆ 8 ಗಂಟೆಯಿದ ಸಂಜೆ 4ಗಂಟೆವರೆಗೆ ನಡೆದ ಮತದಾನದಲ್ಲಿ ಒಟ್ಟು 3,178 ಪುರುಷ ಮತದಾರರ ಪೈಕಿ 2,787 ಜನರು ಹಾಗೂ ಒಟ್ಟು 2,224 ಮಹಿಳಾ ಮತದಾರರ ಪೈಕಿ 1,860 ಜನರು ಮತಚಲಾಯಿಸಿದ್ದು, ಶೇ.86.02ರಷ್ಟು ಮತದಾನವಾಗಿದೆ ಎಂದು ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯೋತ್ಸವ ದಿನದಂದು ಬೆಂಗಳೂರು-ಮುಂಬೈ ವಂದೇ ಭಾರತ್ ಸ್ಲೀಪರ್ ಎಕ್ಸ್‌ಪ್ರೆಸ್ ಸಂಚಾರಕ್ಕೆ ಚಾಲನೆ?

ಮಾರ್ಗವಾಗಿ ಈ ರೈಲು ಸಂಚರಿಸಲಿದ್ದು ಕಲಬುರಗಿ, ರಾಯಚೂರು ಸೇರಿದಂತೆ ಕಲ್ಯಾಣ ಕರ್ನಾಟಕ ಜನ ಸಂತಸ ವ್ಯಕ್ತಪಡಿಸಿದ್ದು ಬೆಂಗಳೂರು-ಮುಂಬೈ ವಂದೇ ಭಾರತ್ ಸ್ಲೀಪರ್ ಎಕ್ಸ್ಪ್ರೆಸ್ ಧರ್ಮಾವರಂ, ಅನಂತಪುರ, ಗುಂತಕಲ್, ರಾಯಚೂರು, ವಾಡಿ, ಕಲಬುರಗಿ, ಸೋಲಾಪೂರ, ಪುಣೆ , ಕಲ್ಯಾಣ ರೈಲ್ವೆ ನಿಲ್ದಾಣದಲ್ಲಿ ನಿಲುಗಡೆಯಾಗಲಿದೆ ಎಂದು ಅವರು ತಿಳಿಸಿದ್ದಾರೆ.

ಈ ರೈಲು ಕರ್ನಾಟಕಕ್ಕೆ ಲಭಿಸಲು ಸಂಸದ ಪಿ.ಸಿ.ಮೋಹನ್ ಅವರ ಪಾತ್ರ ಪ್ರಮುಖವಾಗಿದೆ.ಜೊತೆಗೆ ತಾವು ವರ್ಷವಿಡೀ ಎಡೆಬಿಡದೆ ಮಾಡಿದ ಪ್ರಯತ್ನಕ್ಕೆ ಸಿಕ್ಕ ಪ್ರತಿಫಲವಾಗಿದೆ. ತಮ್ಮ ಮನವಿಗೆ ಸ್ಪಂದಿಸಿದ ರೈಲ್ವೆ ಸಚಿವರಾದ ಅಶ್ವಿನ್ ವೈಷ್ಣವಿ,ರಾಜ್ಯ ಖಾತೆ ಸಚಿವ ಸೋಮಣ್ಣ ಅವರು ಅಭಿನಂನಾರ್ಹರು ಎಂದಿದ್ದಾರೆ

ತಿಡಿಗೋಳ ಗ್ರಾಮದಲ್ಲಿ ದಲಿತರ ಮೇಲೆ ಸವರ್ಣೀಯರಿಂದ ದೌರ್ಜನ್ಯ: ಸ್ಥಳಕ್ಕೆ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಭೇಟಿ

ಪ್ರದೇಶದಲ್ಲಿ ಚರಂಡಿ ಅವ್ಯವಸ್ಥೆ ಮಾತ್ರವಲ್ಲದೇ ಕುಡಿಯುವ ನೀರಿನ ಸಮಸ್ಯೆ ಇದೆ. ಹೀಗಾಗಿ ಕೂಡಲೇ ಪ್ರತ್ಯೇಕ ಬೋರ್‌ವೆಲ್ ಕೊರೆಯಿಸಿ ಆರ್.ಓ ಪ್ಲಾಂಟ್ ನಿರ್ಮಿಸಿ ಕೂಡಲೇ ನೀರಿನ ಅಭಾವದ ಸಮಸ್ಯೆಯನ್ನು ಪರಿಹರಿಸಬೇಕು ಎಂದು ಆಗ್ರಹಿಸಿದರು.

ಕೌಂಟರ್ ಕೇಸ್ ತೆಗೆಯದಿದ್ದರೆ ಹೋರಾಟ: ಡಿ.ಎಚ್.ಪೂಜಾರ್ ಎಚ್ಚರಿಕೆ

ತಿಡಿಗೋಳ ಗ್ರಾಮದ ದಲಿತ ಸಮುದಾಯದವರ ಮೇಲೆ ಸವರ್ಣೀಯರ ಗುಂಪು ಸಾಮೂಹಿಕ ದೌರ್ಜನ್ಯ ನಡೆಸಿದ್ದು, ಈ ಕುರಿತಂತೆ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಆದರೆ ಕೆಲವರು ಕುತಂತ್ರದಿಂದ ದಲಿತ ಸಮುದಾಯದವರ ಮೇಲೆ ಕೌಂಟರ್ ಕೇಸ್ ದಾಖಲಿಸಿದ್ದು ಕೂಡಲೇ ಈ ಕೌಂಟರ್ ಕೇಸ್ ತೆಗೆಯಬೇಕು ಇಲ್ಲದೇ ಹೋದಲ್ಲಿ ಹೋರಾಟ ತೀವ್ರಗೊಳಿಸಲಾಗುವುದು ಎಂದು ಸಿಪಿಐ(ಎಂಎಲ್) ಮಾಸ್‌ಲೈನ್ ರಾಜ್ಯ ಕಾರ್ಯದರ್ಶಿ ಡಿ.ಎಚ್.ಪೂಜಾರ್ ಎಚ್ಚರಿಸಿದರು.

ವಿವಿಧ ಮತಗಟ್ಟೆ ಕೇಂದ್ರಗಳಿಗೆ ಸಿಇಓ ಈಶ್ವರ್ ಕಾಂದೂ ಭೇಟಿ ನೀಡಿ ಪರಿಶೀಲನೆ

ಮತದಾನ ಮಾಡಲು ಆಗಮಿಸುವ ಪ್ರತಿಯೊಬ್ಬ ಮತದಾರರ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಪರಿಶೀಲಿಸಿ, ಚುನಾವಣಾ ನಿಯಮಾನುಸಾರ ಮತದಾನಕ್ಕೆ ಅವಕಾಶ ಕಲ್ಪಿಸಬೇಕು ಎಂದು ಸಂಬಧಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಸೂಚಿಸಿದರು.ಇದೇ ವೇಳೆ, ಮತಗಟ್ಟೆ ಕೇಂದ್ರಗಳಲ್ಲಿ ಮತದಾರರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿರುವ ಕುರಿತು ಸಿಬ್ಬಂದಿಯಿದ ಮಾಹಿತಿ ಪಡೆದರು. ಮತದಾನ ಪ್ರಕ್ರಿಯೆಯು ಸುಗಮವಾಗಿ, ಶಾಂತಿಯುತವಾಗಿ ಹಾಗೂ ಚುನಾವಣಾ ಮಾರ್ಗಸೂಚಿಗಳನ್ವಯ ನಡೆಯುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದರು.

ವಿಧಾನ ಪರಿಷತ್ ಚುನಾವಣೆ: ಮಸ್ಟರಿಂಗ್ ಕಾರ್ಯ ಪರಿಶೀಲಿಸಿದ ಚುನಾವಣಾಧಿಕಾರಿ ಝುಹೀರಾ ನಸೀಮ್



ಕಲಬುರಗಿ

ಕರ್ನಾಟಕ ವಿಧಾನ ಪರಿಷತ್ತಿಗೆ ಈಶಾನ್ಯ ಶಿಕ್ಷಕರ ಕ್ಷೇತ್ರದಿಂದ ಒಂದು ಸ್ಥಾನ ಆಯ್ಕೆಗೆ ಶುಕ್ರವಾರ ಬೆಳಿಗ್ಗೆ 8 ರಿಂದ ಸಂಜೆ 4 ಗಂಟೆವರೆಗೆ ಮತದಾನ ನಡೆಯಲಿರುವ ಹಿನ್ನೆಲೆಯಲ್ಲಿ ಗುರುವಾರ ಆಯಾ ಜಿಲ್ಲೆಯಲ್ಲಿ ನಡೆಯುತ್ತಿರುವ ಮಸ್ಟರಿಂಗ್ ಕಾರ್ಯ ಪ್ರಗತಿ ಕುರಿತು ಕ್ಷೇತ್ರದ ಚುನಾವಣಾಧಿಕಾರಿ ಮತ್ತು ವೀಕ್ಷಕರು ಮಾಹಿತಿ ಪಡೆದುಕೊಂಡರು.

ಕ್ಷೇತ್ರದ ಚುನಾವಣಾಧಿಕಾರಿ ಯಾಗಿ ರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಝುಹೀರಾ ನಸೀಮ್ ಮತ್ತು ಚುನಾವಣಾ ವೀಕ್ಷಕ ಶಿವಕುಮಾರ ಕೆ.ಬಿ. ಅವರು ವಿಡಿಯೋ ಕಾನ್ಫರೆನ್ಸ್ ಮೂಲಕ ಕ್ಷೇತ್ರದ ವ್ಯಾಪ್ತಿಯ ಏಳು ಜಿಲ್ಲೆಗಳ ಜಿಲ್ಲಾ ಚುನಾವಣಾಧಿಕಾರಿಗಳೊಂದಿಗೆ ಸಭೆ ನಡೆಸಿ ಮಸ್ಟರಿಂಗ್ ಕಾರ್ಯ ಸುಲಲಿತವಾಗಿ ನಡೆಯುವಂತೆ ನೋಡಿಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಮಾತನಾಡಿದ ಚುನಾವಣಾಧಿಕಾರಿ ಝುಹೀರಾ ನಸೀಮ್ ಅವರು, ನಿಗದಿಯಂತೆ ಬೆಳಿಗ್ಗೆ 8 ಗಂಟೆಗೆ ಮತದಾನ ಆರಂಭಿಸಬೇಕು. ಯಾವುದೇ ಕಾರಣಕ್ಕೂ ವಿಳಂಬ ಮಾಡಬಾರದು. ಮತಗಟ್ಟೆಗಳಿಗೆ ಅವಶ್ಯವಿರುವ ನಮೂನೆ, ಲಕೋಟೆ ಹಾಗೂ ಸ್ಟೇಷನರಿ ಸಾಮಗ್ರಿಗಳನ್ನು ಮತಗಟ್ಟೆ ಅಧಿಕಾರಿ-ಸಿಬ್ಬಂದಿಗಳಿಗೆ ನೀಡಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಇನ್ನು ಮತದಾನ ದಿನದಂದು ಪ್ರತಿ ಎರಡು ಗಂಟೆಗೊಮ್ಮೆ ಮತದಾನ ಪ್ರಮಾಣ ಕುರಿತು ವರದಿ ನೀಡಬೇಕೆಂದು ಸೂಚಿಸಿದರು.

ಅವಶ್ಯಕತೆಯಿರುವ ಮತದಾನ ಕೇಂದ್ರದಲ್ಲಿ ಶಾಮಿಯಾನದ ವ್ಯವಸ್ಥೆ ಮಾಡಬೇಕು. ಮತಗಟ್ಟೆ ಸಿಬ್ಬಂದಿಗಳಿಗೆ ಊಟೋಪಚಾರದ ವ್ಯವಸ್ಥೆ ಮಾಡಬೇಕು ಸೂಕ್ಷ್ಮ, ಅತಿಸೂಕ್ಷ್ಮ ಹಾಗೂ ಸಾಮಾನ್ಯ ಮತಗಟ್ಟೆಗಳಿಗೆ ಅಗತ್ಯ ಪೊಲೀಸ್ ಸಿಬ್ಬಂದಿಯನ್ನು ಭದ್ರತೆಗೆ ನಿಯೋಜಿಸಬೇಕೆಂದ ಚುನಾವಣಾಧಿಕಾರಿಗಳು, ಮತದಾನದ ನಂತರ ಬ್ಯಾಲೆಟ್ ಬಾಕ್ಸ್ ಗಳನ್ನು ಬಿಗಿ ಭದ್ರತೆಯಲ್ಲಿ ಭದ್ರತಾ ಕೊಠಡಿಗೆ ತಲುಪಿಸುವ ವ್ಯವಸ್ಥೆ ಮಾಡಬೇಕೆಂದರು.

ಚುನಾವಣಾ ವೀಕ್ಷಕ ಶಿವಕುಮಾರ ಕೆ.ಬಿ.ಮಾತನಾಡಿ, ಮತಗಟ್ಟೆಗೆ ಬರುವ ಮತದಾರರನ್ನು ಸೌಹಾರ್ದಯುತವಾಗಿ ನಡೆಸಿಕೊಳ್ಳಬೇಕು. ಯಾವುದೇ ಅಹಿತಕರ ಘಟನೆಗೆ ಅವಕಾಶ ನೀಡಬಾರದು. ಇನ್ನು ಡಿ.ಇ.ಓ ಗಳು ಮಸ್ಟರಿಂಗ್ ಮತ್ತು ಡಿ-ಮಸ್ಟರಿಂಗ್ ಕಾರ್ಯ ವ್ಯವಸ್ಥಿತವಾಗಿ ನಡೆಯುತ್ತಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳಬೇಕೆಂದರು.

ಸಭೆಯಲ್ಲಿ ಕಲಬುರಗಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು(ಅಭಿವೃದ್ಧಿ) ಮತ್ತು ಪ್ರಭಾರಿ ಹೆಚ್ಚುವರಿ ಪ್ರಾದೇಶಿಕ ಆಯುಕ್ತರಾಗಿರುವ ಪ್ರಮೀಳಾ ಎಂ.ಕೆ. ಸೇರಿದಂತೆ ಏಳು ಜಿಲ್ಲೆಗಳ ಸಹಾಯಕ ಚುನಾವಣಾಧಿಕಾರಿಗಳು ಭಾಗಿಯಾಗಿದ್ದರು.



ನಕಲಿ ವೈದ್ಯರಿಗೆ ಔಷಧ ಸರಬರಾಜು ಆರೋಪ: ಮೆಡಿಕಲ್ ಸ್ಟೋರ್ಸ್‌ಗಳ ಪರವಾನಗಿ ಅಮಾನತು

ಬೀದರ್

ನಕಲಿ ವೈದ್ಯರಿಗೆ ಔಷಧ ಸರಬರಾಜು ಮಾಡಿದ ಮೆಡಿಕಲ್ ಸ್ಟೋರ್ಸ್‌ಗಳ ಪರವಾನಗಿ ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ ಎಂದು ಬೀದರ್ ಸಹಾಯಕ ಔಷಧ ನಿಯಂತ್ರಕ ಧನಂಜಯ್ ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಹುಮನಾಬಾದ್ ನಗರದ ದೇವಿ ಕೃಪಾ ಮೆಡಿಕಲ್, ಸಾಯಿ ಸರ್ಜಿಕಲ್ಸ್, ಆದ್ಯ ಫಾರ್ಮಾ, ಬಸವಕಲ್ಯಾಣದ ವೀರಭದ್ರೇಶ್ವರ್ ಮೆಡಿಕಲ್ ಹಾಗೂ ಜಂಬಗಿಯ ಶ್ರೀನಾಥ್ ಮೆಡಿಕಲ್ ಔಷಧ ಅಂಗಡಿಗಳ ಲೈಸೆನ್ಸ್ ಗಳನ್ನು ಅ.26ರಿಂದ ಜಾರಿಗೆ ಬರುವಂತೆ ಹತ್ತು ದಿನಗಳ ವರೆಗೆ ಅಮಾನತುಗೊಳಿಸಲಾಗಿದೆ. ಅದೇ ರೀತಿ, ಭಾಲ್ಕಿ ನಗರದ ಶಿವಾ ಮೆಡಿಕಲ್ ಮತ್ತು ಬಿರಾದಾರ್ ಫಾರ್ಮಾ ಸಂಸ್ಥೆಗಳ ಲೈಸೆನ್ಸ್ ಗಳನ್ನು ಐದು ದಿನಗಳವರೆಗೆ ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿದೆ.

ಜಿಲ್ಲೆಯಲ್ಲಿ ಇತ್ತೀಚೆಗೆ ನಡೆದ ಕೆಪಿಎಂಇ ಜಿಲ್ಲಾ ಮಟ್ಟದ ನೋಂದಣಿ ಮತ್ತು ಕುಂದುಕೊರತೆ ಪರಿಹಾರ ಪ್ರಾಧಿಕಾರದ ಸಭೆಯಲ್ಲಿ ನಕಲಿ ವೈದ್ಯರ ವಿರುದ್ಧ ದಂಡ ವಿಧಿಸಿ ಕ್ರಮ ಕೈಗೊಂಡ ಬೆನ್ನಲ್ಲೇ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಧಿಕಾರಿಗಳು ತನಿಖೆ ಕೈಗೊಂಡಿದ್ದರು. ನಕಲಿ ವೈದ್ಯರಿಗೆ ಔಷಧಗಳನ್ನು ಸರಬರಾಜು ಮಾಡುತ್ತಿದ್ದ ಔಷಧ ಅಂಗಡಿಗಳನ್ನು ಪತ್ತೆಹಚ್ಚಿ ಈ ಕ್ರಮ ಜರುಗಿಸಲಾಗಿದೆ. ಯಾವುದೇ ಔಷಧ ಅಂಗಡಿಯವರು ನಕಲಿ ವೈದ್ಯರಿಗೆ ಔಷಧಗಳನ್ನು ಸರಬರಾಜು ಮಾಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಎಸ್‌ಎಫ್‌ಐ 17ನೇ ರಾಜ್ಯ ಸಮ್ಮೇಳನದ ಪೋಸ್ಟರ್ ಬಿಡುಗಡೆ



ಕಲಬುರಗಿ:

ಭಾರತ ವಿದ್ಯಾರ್ಥಿ ಫೆಡರೇಶನ್ (ಎಸ್‌ಎಫ್‌ಐ) ಸಂಘಟನೆಯ 17ನೇ ರಾಜ್ಯ ಸಮ್ಮೇಳನದ ಅಂಗವಾಗಿ ನಗರದ ಜಗತ್ ವೃತ್ತದಲ್ಲಿ ಪೋಸ್ಟರ್ ಬಿಡುಗಡೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಹಿರಿಯ ಸಾಹಿತಿಗಳು, ಪ್ರಗತಿಪರ ಚಿಂತಕರು, ವಿದ್ಯಾರ್ಥಿಗಳು, ಶಿಕ್ಷಣ ಪ್ರೇಮಿಗಳು ಹಾಗೂ ಎಸ್‌ಎಫ್‌ಐ ಪದಾಧಿಕಾರಿಗಳು ಒಟ್ಟಾಗಿ ಪೋಸ್ಟರ್ ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ಸಮ್ಮೇಳನದ ಸ್ವಾಗತ ಸಮಿತಿಯ ಉಪಾಧ್ಯಕ್ಷ ಅರ್ಜುನ್ ಭದ್ರೆ, ಮಾತನಾಡಿ, ''ಈ ಸಮ್ಮೇಳನವು ವಿದ್ಯಾರ್ಥಿಗಳ ಹಕ್ಕುಗಳನ್ನು ಎತ್ತಿಹಿಡಿಯುವುದರ ಜೊತೆಗೆ ನಾಡಿನ ಸೌಹಾರ್ದತೆಯನ್ನು ಬಲಪಡಿಸುವ ಉದ್ದೇಶ ಹೊಂದಿದೆ. ಕಲಬುರಗಿ ಜಿಲ್ಲೆಯ ಜನತೆ ಈ ಸಮ್ಮೇಳನವನ್ನು ನಮ್ಮ ವಿದ್ಯಾರ್ಥಿಗಳ ಸಮ್ಮೇಳನವೆಂದು ಭಾವಿಸಿ, ಅಗತ್ಯ ಸಹಾಯ, ಸಹಕಾರ ಹಾಗೂ ಸಲಹೆಗಳನ್ನು ನೀಡುವ ಮೂಲಕ ಯಶಸ್ವಿಗೊಳಿಸಬೇಕು. ಇದು ದಾಸೋಹದ ನಾಡಾಗಿದ್ದು, ಎಲ್ಲರ ಸಹಕಾರದಿಂದ ಸಮ್ಮೇಳನ ಯಶಸ್ವಿಯಾಗಿ ನಡೆಯಲಿದೆ ಎಂಬ ವಿಶ್ವಾಸವಿದೆ'' ಎಂದು ಹೇಳಿದರು.

ದಲಿತ ಸಂಘರ್ಷ ಸಮಿತಿಯ ಮುಖಂಡ ಮರಿಯಪ್ಪ ಹಳ್ಳಿ ಮಾತನಾಡಿ, ''ಎಸ್‌ಎಫ್‌ಐನ ರಾಜ್ಯ ಸಮ್ಮೇಳನದಲ್ಲಿ ವಿದ್ಯಾರ್ಥಿಗಳ ಹಾಗೂ ಶಿಕ್ಷಣ ಕ್ಷೇತ್ರದ ಸಮಸ್ಯೆಗಳ ಕುರಿತು ಮೂರು ದಿನಗಳ ಕಾಲ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸುವ ವಿದ್ಯಾರ್ಥಿಗಳು ಚರ್ಚಿಸಲಿದ್ದಾರೆ. ಈ ಸಮ್ಮೇಳನವನ್ನು ಜಿಲ್ಲೆಯ ಜನರೆಲ್ಲರೂ ಒಗ್ಗಟ್ಟಿನಿಂದ ಯಶಸ್ವಿಗೊಳಿಸುವುದು ನಮ್ಮೆಲ್ಲರ ಪ್ರಗತಿಪರ ಕರ್ತವ್ಯವಾಗಿದೆ. ಅಕ್ಟೋಬರ್ 30ರಂದು ನಡೆಯಲಿರುವ ಬಹಿರಂಗ ಸಭೆಯಲ್ಲಿ ವಿದ್ಯಾರ್ಥಿಗಳು, ಶಿಕ್ಷಣ ಪ್ರೇಮಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು'' ಎಂದು ಕರೆ ನೀಡಿದರು.

ಎಸ್‌ಎಫ್‌ಐ ರಾಜ್ಯ ಉಪಾಧ್ಯಕ್ಷ ಗಣೇಶ ರಾಠೋಡ ಮಾತನಾಡಿ, ''ಸಾರ್ವಜನಿಕ ಶಿಕ್ಷಣವನ್ನು ಬಲಪಡಿಸುವುದು, ವಿದ್ಯಾರ್ಥಿ ಸಂಘಟನೆಗಳ ಚುನಾವಣೆ ನಡೆಸುವುದು, ಕೋಮು ಸೌಹಾರ್ದತೆಯನ್ನು ಕಾಪಾಡುವುದು ಹಾಗೂ ಸಂವಿಧಾನದ 371(ಜೆ) ಕಲಂ ಅನ್ನು ಸಮರ್ಪಕವಾಗಿ ಜಾರಿಗೊಳಿಸುವಂತೆ ಒತ್ತಾಯಿಸಿ ಎಸ್‌ಎಫ್‌ಐನ 17ನೇ ರಾಜ್ಯ ಸಮ್ಮೇಳನವನ್ನು ಆಯೋಜಿಸಲಾಗಿದೆ'' ಎಂದು ತಿಳಿಸಿದರು.

ಸಮ್ಮೇಳನವು ಕಲಬುರಗಿ ನಗರದ ಕರುಣೇಶ್ವರ ನಗರದಲ್ಲಿರುವ ಕೆಪಿಟಿಸಿಎಲ್ ಭವನದಲ್ಲಿ ಅಕ್ಟೋಬರ್ 30, 31 ಹಾಗೂ ನವೆಂಬರ್ 1ರಂದು ನಡೆಯಲಿದೆ. ಅಕ್ಟೋಬರ್ 30ರಂದು ಬೆಳಿಗ್ಗೆ 10:30ಕ್ಕೆ ತಿಮ್ಮಾಪುರ ವೃತ್ತದಿಂದ ಜಗತ್ ವೃತ್ತದವರೆಗೆ ಬೃಹತ್ ಮೆರವಣಿಗೆ ನಡೆಯಲಿದ್ದು, ನಂತರ ಜಗತ್ ವೃತ್ತದಲ್ಲಿ ಬಹಿರಂಗ ಸಭೆ ಜರುಗಲಿದೆ.

ಬಹಿರಂಗ ಸಭೆಯನ್ನು ಎಸ್‌ಎಫ್‌ಐ ರಾಷ್ಟ್ರೀಯ ಅಧ್ಯಕ್ಷ ಆದರ್ಶ ಎಂ.ಸಾಜಿ ಉದ್ಘಾಟಿಸಲಿದ್ದಾರೆ. ದಿಲ್ಲಿಯಲ್ಲಿ ಜಂತರ್ ಮಂತರ್‌ನಲ್ಲಿ ನಡೆದ ಹೋರಾಟಗಳಲ್ಲಿ ಪ್ರಮುಖ ಪಾತ್ರ ವಹಿಸಿದ ಕಾಮ್ರೇಡ್ ಆಯಿಷಿ ಘೋಷ್ ಮುಖ್ಯ ಭಾಷಣಕಾರರಾಗಿ ಭಾಗವಹಿಸಲಿದ್ದಾರೆ. ನಾಡಿನ ಹಿರಿಯ ಸಾಹಿತಿಗಳಾದ ಆರ್.ಕೆ. ಹುಡುಗಿ, ಆರ್.ಜಿ. ಶೇಟಗಾರ, ಮೀನಾಕ್ಷಿ ಬಾಳಿ, ಎಸ್‌ಎಫ್‌ಐ ರಾಜ್ಯ ಅಧ್ಯಕ್ಷ ಶಿವಪ್ಪ ಅಂಬ್ಲಿಕಲ್ ಹಾಗೂ ರಾಜ್ಯ ಕಾರ್ಯದರ್ಶಿ ವಿಜಯಕುಮಾರ್ ಸೇರಿದಂತೆ ರೈತ, ಕೃಷಿ ಕೂಲಿಕಾರ, ಕಾರ್ಮಿಕ, ದಲಿತ, ವಿದ್ಯಾರ್ಥಿ-ಯುವಜನ ಹಾಗೂ ಮಹಿಳಾ ಸಂಘಟನೆಗಳ ಮುಖಂಡರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ಎಸ್‌ಎಫ್‌ಐ ಜಿಲ್ಲಾ ಅಧ್ಯಕ್ಷೆ ಸುಜಾತ ವೈ., ಜಿಲ್ಲಾ ಕಾರ್ಯದರ್ಶಿ ಇಮಾಮ್ ಸಾಬ್, ಡಿವೈಎಫ್‌ಐ ರಾಜ್ಯ ಅಧ್ಯಕ್ಷ ಲವಿತ್ರಾ ವಸ್ತ್ರದ, ಸ್ವಾಗತ ಸಮಿತಿಯ ಹನಮಂತರಾಯ ದೊಡ್ಡಮನಿ, ಎಸ್‌ಎಫ್‌ಐ ತಾಲೂಕು ಕಾರ್ಯದರ್ಶಿ ಬೃಂದಾ, ಮುಖಂಡರಾದ ತಾಯಣ್ಣ ಟೋಕಾಪುರ, ಪೂಜಾ, ಅಕ್ಷರಾ, ಸಪ್ನಾ ಸೇರಿದಂತೆ ಹಲವು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಜಿಲ್ಲಾಡಳಿತದ ವತಿಯಿಂದ ಉಚಿತ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿಗೆ ವಿಷಯ ತಜ್ಞರಿಂದ ಅರ್ಜಿ ಆಹ್ವಾನ

ರಾಯಚೂರು ಅ.23

ರಾಯಚೂರು ಜಿಲ್ಲಾಡಳಿತ ವತಿಯಿಂದ ಜಿಲ್ಲೆಯ ಅರ್ಹ ಹಾಗೂ ಉದ್ಯೋಗಾಕಾಂಕ್ಷಿ ಯುವಕರಿಗೆ ಯುಪಿಎಸ್‌ಸಿ, ಕೆಪಿಎಸ್‌ಸಿ, ಕೆಇಎ, ಎಸ್‌ಎಸ್‌ಸಿ, ಬ್ಯಾಂಕಿಗ್, ರೈಲ್ವೆ, ಪೊಲೀಸ್, ರಕ್ಷಣಾ, ಅರಣ್ಯ, ಪಿಡಿಒ, ಎಫ್‌ಡಿಎ, ಎಸ್‌ಡಿಎ, ಪಿಎಸ್‌ಐ, ಪಿಸಿ ಸೇರಿದಂತೆ ವಿವಿಧ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸ್ಪರ್ಧಾತ್ಮಕ/ನೇಮಕಾತಿ ಪರೀಕ್ಷೆಗಳಿಗೆ ಉಚಿತ ಪೂರ್ವಸಿದ್ಧತಾ ತರಬೇತಿ ನೀಡಲಾಗುತ್ತಿದೆ.

ಈ ತರಬೇತಿ ಕಾರ್ಯಕ್ರಮಕ್ಕೆ ಅರ್ಹ, ಅನುಭವಿ ಹಾಗೂ ವಿಷಯ ಪರಿಣತಿ ಹೊಂದಿರುವ ವಿಷಯ ತಜ್ಞರು / ಅಧ್ಯಾಪಕರು / ಸಂಪನ್ಮೂಲ ವ್ಯಕ್ತಿಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರಮುಖ ವಿಷಯಗಳು: ಸಾಮಾನ್ಯ ಅಧ್ಯಯನ, ಭಾರತೀಯ ಇತಿಹಾಸ ಮತ್ತು ಕರ್ನಾಟಕ ಇತಿಹಾಸ, ಭಾರತೀಯ ಸಂವಿಧಾನ ಮತ್ತು ರಾಜಕೀಯ, ಭಾರತೀಯ ಹಾಗೂ ಕರ್ನಾಟಕ ಭೂಗೋಳಶಾಸ್ತ್ರ, ಅರ್ಥಶಾಸ್ತ್ರ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ, ಪ್ರಚಲಿತ ವಿದ್ಯಮಾನಗಳು, ಕರ್ನಾಟಕ ಸಾಮಾನ್ಯ ಜ್ಞಾನ, ಸಾಮಾನ್ಯ ಕನ್ನಡ, ಸಾಮಾನ್ಯ ಇಂಗ್ಲಿಷ್, ಗಣಿತ/ ಸಂಖ್ಯಾತ್ಮಕ ಸಾಮರ್ಥ್ಯ, ತಾರ್ಕಿಕ ಸಾಮರ್ಥ್ಯ, ಮಾನಸಿಕ ಸಾಮರ್ಥ್ಯ, ದತ್ತಾಂಶ ವಿಶ್ಲೇಷಣೆ, ಕಂಪ್ಯೂಟ/ಡಿಜಿಟಲ್ ಅರಿವು, ಬ್ಯಾಂಕಿಗ್ ಮತ್ತು ಹಣಕಾಸು ಅರಿವು ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷಾ ವಿಷಯಗಳಲ್ಲಿ ಪರಿಣತಿ ಹೊಂದಿರುವವರಿದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹತೆ: ಅರ್ಜಿದಾರರು ಕನಿಷ್ಠ ಸ್ನಾತಕೋತ್ತರ ಪದವಿ ಹೊಂದಿರಬೇಕು ಹಾಗೂ ಕಡ್ಡಾಯವಾಗಿ ಸ್ಪರ್ಧಾತ್ಮಕ ಪರೀಕ್ಷಾ ಬೋಧನಾ ಕ್ಷೇತ್ರದಲ್ಲಿ ಕನಿಷ್ಠ 10 ವರ್ಷಗಳ ಅನುಭವ ಹೊಂದಿರಬೇಕು. ಯುಪಿಎಸ್‌ಸಿ/ ಕೆಪಿಎಸ್‌ಸಿ/ ಕೆಇಎ/ ಎಸ್‌ಎಸ್‌ಸಿ/ ಬ್ಯಾಂಕಿಗ್/ ರೈಲ್ವೆ/ ಪೊಲೀಸ್/ ರಕ್ಷಣಾ ಮುಂತಾದ ಪರೀಕ್ಷೆಗಳಿಗೆ ತರಬೇತಿ ನೀಡಿದ ಅನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲೆಗಳು: ಶೈಕ್ಷಣಿಕ ಅರ್ಹತೆ ಮತ್ತು ಸ್ನಾತಕೋತ್ತರ ಪದವಿ ಪ್ರಮಾಣಪತ್ರ, ಕನಿಷ್ಠ 10 ವರ್ಷಗಳ ಸ್ಪರ್ಧಾತ್ಮಕ ಪರೀಕ್ಷಾ ಬೋಧನಾ ಅನುಭವದ ಪ್ರಮಾಣಪತ್ರಗಳು, ಈ ಹಿಂದೆ ತರಬೇತಿ ನೀಡಿದ ಸಂಸ್ಥೆಗಳ ವಿವರ, ಬೋಧನಾ ಸಾಧನೆ ವಿವರ, ಗುರುತಿನ ಚೀಟಿ, ಇತ್ತೀಚಿನ ಭಾವಚಿತ್ರ ಹಾಗೂ ಇತರೆ ಸಂಬಧಿತ ದಾಖಲೆಗಳ ಪ್ರತಿಗಳನ್ನು ಸಲ್ಲಿಸಬೇಕು.

ಅರ್ಜಿದಾರರು ತಮ್ಮ ಯೂಟ್ಯೂಬ್/ಆನ್‌ಲೈನ್ ಬೋಧನಾ ವೀಡಿಯೊ ಲಿಂಕ್ ಅನ್ನು ಕಡ್ಡಾಯವಾಗಿ ನೀಡಬೇಕು. ಲಭ್ಯವಿರುವ ಬೋಧನಾ ವೀಡಿಯೊಗಳನ್ನು ವಿಷಯ ನಿರೂಪಣೆ ಹಾಗೂ ಬೋಧನಾ ಸಾಮರ್ಥ್ಯ ಪರಿಶೀಲನೆಗೆ ಪರಿಗಣಿಸಲಾಗುವುದು.

ಆಯ್ಕೆ ವಿಧಾನ: ಅರ್ಜಿಗಳನ್ನು ಶೈಕ್ಷಣಿಕ ಅರ್ಹತೆ, ಬೋಧನಾ ಅನುಭವ, ವಿಷಯ ಪರಿಣತಿ ಹಾಗೂ ದಾಖಲೆಗಳ ಪರಿಶೀಲನೆಯ ಆಧಾರದ ಮೇಲೆ ಪರಿಶೀಲಿಸಲಾಗುವುದು. ಅಗತ್ಯವಿದ್ದಲ್ಲಿ ಆ ಅಟಚಿ/ಟಣಡಿಚಿಭಿಣಟ ನಡೆಸಿ ವಿಷಯ ತಜ್ಞರನ್ನು ಆಯ್ಕೆ ಮಾಡಲಾಗುವುದು.

ಗೌರವಧನ: ಆಯ್ಕೆಯಾದ ವಿಷಯ ತಜ್ಞರಿಗೆ ಪ್ರತಿ 1 ಗಂಟೆಯ ತರಗತಿಗೆ ರೂ.1,000/- (ರೂಪಾಯಿ ಒಂದು ಸಾವಿರ ಮಾತ್ರ) ಗೌರವಧನವನ್ನು ಕಾರ್ಯಕ್ರಮದ ನಿಯಮಗಳು ಮತ್ತು ಷರತ್ತುಗಳಿಗೆ ಒಳಪಟ್ಟು ಪಾವತಿಸಲಾಗುವುದು.

ಅರ್ಜಿ ಸಲ್ಲಿಸುವ ವಿಧಾನ: ಆಸಕ್ತ ಹಾಗೂ ಅರ್ಹ ವಿಷಯ ತಜ್ಞರು ಅಗತ್ಯ ದಾಖಲೆಗಳೊಂದಿಗೆ ತಮ್ಮ ಅರ್ಜಿಯನ್ನು ರೆಜಿಸ್ಟರ್ ಪೋಸ್ಟ್ ಮೂಲಕ ಜಿಲ್ಲಾಧಿಕಾರಿಗಳು ರಾಯಚೂರು. ಜಿಲ್ಲಾಡಳಿತ ಭವನ, ಯಕ್ಲಾಸಪುರ, ರಾಯಚೂರು 584101. ಲಕೋಟೆಯ ಮೇಲ್ಭಾಗದಲ್ಲಿ ''ಂಜಿಅಖಿಔಓ ಈಔಖ :ಎಇಅಖಿ ಇಫಿಇಖಖಿ ಅಠಿಣಣ ಇಚಿಟಚಿಣಟ ಖಿಡಿಚಿಟಟ ಡಿಡಿಚಿ'' ಎಂದು ನಮೂದಿಸಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 27.10.2026 ನಿಗದಿತ ದಿನಾಂಕದ ನಂತರ ತಲುಪುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಅಪೂರ್ಣ ಅರ್ಜಿಗಳು ಹಾಗೂ ಅಗತ್ಯ ದಾಖಲೆಗಳಿಲ್ಲದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಆಯ್ಕೆ ಪ್ರಕ್ರಿಯೆಗೆ ಸಂಬಧಿಸಿದತೆ ಜಿಲ್ಲಾಡಳಿತ, ರಾಯಚೂರು ಕೈಗೊಳ್ಳುವ ನಿರ್ಧಾರವು ಅಂತಿಮವಾಗಿರುತ್ತದೆ.

ಜಿಲ್ಲೆಯ ಯುವಕರಿಗೆ ಅನುಭವಿ ಹಾಗೂ ಗುಣಮಟ್ಟದ ವಿಷಯ ತಜ್ಞರಿಂದ ಉಚಿತ ಮತ್ತು ಫಲಿತಾಂಶಮುಖಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಒದಗಿಸುವ ಉದ್ದೇಶದಿಂದ ಈ ಆಯ್ಕೆ ಪ್ರಕ್ರಿಯೆ ಕೈಗೊಳ್ಳಲಾಗಿದ್ದು, ಅರ್ಹ ಹಾಗೂ ಅನುಭವಿ ವಿಷಯ ತಜ್ಞರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕಲಬುರಗಿಗೆ ನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿ ಆಗಮನ

ಕಲಬುರಗಿ:

ಕೋಲಿ ಸಮಾಜದ ದಶಕಗಳ ಕನಸಾಗಿದ್ದ ಹನ್ನೆರಡನೇ ಶತಮಾನದ ಮಹಾನ್ ಶರಣ, ನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿಯನ್ನು ಬುಧವಾರ ನಗರದಲ್ಲಿ ಭವ್ಯವಾಗಿ ಬರಮಾಡಿಕೊಳ್ಳಲಾಯಿತು.

ಸರ್ಕಾರದ ಅನುಮೋದನೆಯೊಂದಿಗೆ, ಕಾನೂನುಬದ್ಧವಾಗಿ ನಗರದ ಹೃದಯಭಾಗದಲ್ಲಿರುವ ಪಬ್ಲಿಕ್ ಗಾರ್ಡನ್‌ನ ಅನ್ನಪೂರ್ಣ ವೃತ್ತದ ಸಮೀಪ ಮೂರ್ತಿ ಪ್ರತಿಷ್ಠಾಪನೆಗೆ ಉದ್ದೇಶಿಸಿರುವ ಸ್ಥಳದಲ್ಲಿ ಮೂರ್ತಿಗೆ ಪೂಜೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ, ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಸೇರಿದಂತೆ ಸ್ಥಳೀಯ ರಾಜಕೀಯ ಮುಖಂಡರು, ಸಮಾಜದ ಹೋರಾಟಗಾರರು, ಹಿರಿಯ ಗಣ್ಯರು ಹಾಗೂ ಯುವಕರು ಉಪಸ್ಥಿತರಿದ್ದು, ಮೂರ್ತಿಯನ್ನು ಗೌರವಪೂರ್ವಕವಾಗಿ ಬರಮಾಡಿಕೊಂಡರು.

ನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿ ಪ್ರತಿಷ್ಠಾಪನೆಯು ಕೋಲಿ ಸಮಾಜದ ಬಹುದಿನಗಳ ಬೇಡಿಕೆ ಹಾಗೂ ದಶಕಗಳ ಕನಸು ನನಸಾಗುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಅಂಬಿಗರ ಚೌಡಯ್ಯನವರ ವಚನಗಳು, ಸಮಾನತೆಯ ಸಂದೇಶ ಹಾಗೂ ತತ್ವಾದರ್ಶಗಳು ಮುಂದಿನ ಪೀಳಿಗೆಗೆ ಪ್ರೇರಣೆಯಾಗಲಿವೆ ಎಂದು ಸಮಾಜದ ಮುಖಂಡರು ಆಶಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಅಂಬಿಗರ ಚೌಡಯ್ಯ ಜಯಂತೋತ್ಸವ ಸಮಿತಿಯ ಅಧ್ಯಕ್ಷ ಜೈಪ್ರಕಾಶ್ ಕಮಕನೂರ, ಡಾ. ಕಿರಣ ದೇಶಮುಖ, ಖಂಡೇರಾವ, ಪ್ರವೀಣ್ ಪಾಟೀಲ್ ಹರವಾಳ, ಶರಣು ಮೋದಿ, ಸಂತೋಷ್ ಪಾಟೀಲ್ ದನ್ನೂರ, ಮುಖಂಡರಾದ ಸಂತೋಷ್ ಬೆನ್ನೂರ, ಅವ್ವಣ ಮ್ಯಾಕೇರಿ, ಶರಣಪ್ಪ ತಳವಾರ, ಶಾಂತಪ್ಪ ಕೂಡಿ, ಶಿವಶರಣಪ್ಪ ಕೊಬಾಳ, ರಮೇಶ ನಾಟೀಕರ್, ಬಸವರಾಜ ಸಪನಗೋಳ, ಉಮೇಶ ತಳವಾರ, ನ್ಯಾಯವಾದಿ ರಮೇಶ ಕಮಕನೂರ, ಸಂದೇಶ್ ಕಮಕನೂರ, ಅರ್ಜುನ ಜಮಾದಾರ, ವಿಜಯಕುಮಾರ ಹದಗಲ್, ಶಿವಾನಂದ ಹೋನಗುಂಟಿ, ಆನಂದ ಕದರಗಿ, ಅನೀಲ, ಗುಂಡು ಐನಾಪೂರ, ದಿಗಂಬರ ನಾಡಗಿರಿ, ಸುಖದೇವ ಕೋಗನೂರ, ಗುರು ನೆಲೋಗಿ, ಪ್ರೇಮ ಕೋಳಿ, ಅಂಬರೀಷ ಸೋನ್ನ ಹಾಗೂ ಚಿದಾನಂದ ಹೋನಗುಂಟಿ, ವೇಂಕಟೇಶ ಮರತೂರ ಸೇರಿದಂತೆ ಸಮಾಜದ ಹಲವು ಮುಖಂಡರು ಉಪಸ್ಥಿತರಿದ್ದರು.

ಅ. 24ರಂದು ನಾಡೋಜ ಡಾ. ಜೆ.ಎಸ್. ಖಂಡೇರಾವ್ ಅವರ ಕಲಾ ಕೊಡುಗೆ ಕುರಿತ ಅಮೂರ್ತ ಧ್ಯಾನ ಗ್ರಂಥ ಬಿಡುಗಡೆ



ಕಲಬುರಗಿ

ಅ. 24ರಂದು ನಾಡೋಜ ಡಾ. ಜೆ.ಎಸ್. ಖಂಡೇರಾವ್ ಅವರ ಕಲಾ ಕೊಡುಗೆ ಕುರಿತ ಅಮೂರ್ತ ಧ್ಯಾನ ಗ್ರಂಥ ಬಿಡುಗಡೆ

ಕಲಬುರಗಿ: ಕರುನಾಡಿನ ಹೆಮ್ಮೆಯ ಹಿರಿಯ ಚಿತ್ರಕಲಾವಿದ, ನಾಡೋಜ ಡಾ. ಜೆ.ಎಸ್. ಖಂಡೇರಾವ್ ಅವರ ಜೀವನ, ಕಲಾಸಾಧನೆ ಹಾಗೂ ಭಾರತೀಯ ಕಲಾ ಜಗತ್ತಿಗೆ ಅವರು ನೀಡಿದ ಕೊಡುಗೆಯನ್ನು ಪರಿಚಯಿಸುವ ಅಮೂರ್ತ ಧ್ಯಾನ ಗ್ರಂಥ ಬಿಡುಗಡೆ ಹಾಗೂ ಚಿತ್ರಕಲಾ ಪ್ರದರ್ಶನವನ್ನು ಅ. 24ರಂದು ಬೆಳಿಗ್ಗೆ 10.30ಕ್ಕೆ ನಗರದ ಸೇಡಂ ರಸ್ತೆಯ ಎಂಆರ್‌ಎಂಸಿ ಸ್ಯಾಕ್ ಕಟ್ಟಡದಲ್ಲಿ ಆಯೋಜಿಸಲಾಗಿದೆ ಎಂದು ನಾಡೋಜ ಡಾ. ಜೆ.ಎಸ್. ಖಂಡೇರಾವ್ ಪ್ರತಿಷ್ಠಾನದ ಅಧ್ಯಕ್ಷ ಬಸವರಾಜ ಖಂಡೇರಾವ್ ಹಾಗೂ ಗ್ರಂಥದ ಲೇಖಕ ಡಾ. ಅಶೋಕ ಶಟಕಾರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಜಂಟಿಯಾಗಿ ಮಾತನಾಡಿದ ಅವರು, ಈ ಕೃತಿಯು ಪುಸ್ತಕ ಲೋಕದಲ್ಲಿ ವಿಶಿಷ್ಟ ದಾಖಲೆ ಎನಿಸುವುದರ ಜೊತೆಗೆ ಯುವ ಕಲಾವಿದರಿಗೆ ಪ್ರೇರಣೆ ನೀಡಲಿದೆ. ಅಲ್ಲದೆ, ಕಲಾ ಕ್ಷೇತ್ರದ ಸಂಶೋಧನಾ ವಿದ್ಯಾರ್ಥಿಗಳಿಗೆ ಮಾರ್ಗದರ್ಶಕ ಕೃತಿಯಾಗಲಿದೆ ಎಂದರು.

ಮೌನಯೋಗಿ ಜಡೆ ಶಾಂತಲಿಂಗೇಶ್ವರ ಮಹಾಸ್ವಾಮಿಗಳು, ಭಾಲ್ಕಿಯ ಹಿರೇಮಠ ಸಂಸ್ಥಾನದ ಸಮಾಧಾನ ಹಾಗೂ ನಾಡೋಜ ಪೂಜ್ಯ ಡಾ. ಬಸವಲಿಂಗ ಪಟ್ಟದ್ದೇವರು ಮತ್ತು ಶರಣಬಸವೇಶ್ವರ ದಾಸೋಹ ಸಂಸ್ಥಾನದ ಮಾತೋಶ್ರೀ ಡಾ. ದಾಕ್ಷಾಯಿಣಿ ಎಸ್. ಅಪ್ಪ ಅವರ ಸಾನ್ನಿಧ್ಯದಲ್ಲಿ ಕಾರ್ಯಕ್ರಮ ಜರುಗಲಿದೆ.

ಕರ್ನಾಟಕ ಲಲಿತಕಲಾ ಅಕಾಡೆಮಿಯ ಮಾಜಿ ಅಧ್ಯಕ್ಷ ಡಾ. ಎಂ.ಎಸ್. ಮೂರ್ತಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಸಂಸದ ರಾಧಾಕೃಷ್ಣ ದೊಡ್ಡಮನಿ ಅಮೂರ್ತ ಧ್ಯಾನ ಗ್ರಂಥವನ್ನು ಬಿಡುಗಡೆ ಮಾಡಲಿದ್ದಾರೆ. ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ ಚಿತ್ರಕಲಾ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಹಿರಿಯ ಚಿತ್ರಕಲಾವಿದ ಡಾ. ಸಿ. ಚಂದ್ರಶೇಖರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ನಾಡೋಜ ಡಾ. ಜೆ.ಎಸ್. ಖಂಡೇರಾವ್ ಗೌರವ ಉಪಸ್ಥಿತಿ ಇರಲಿದ್ದು, ಪ್ರೊ. ಆರ್.ಕೆ. ಹುಡಗಿ ಪ್ರಾಸ್ತಾವಿಕವಾಗಿ ಮಾತನಾಡಲಿದ್ದಾರೆ. ಪ್ರೊ. ವಿಕ್ರಮ್ ವಿಸಾಜಿ ಗ್ರಂಥದ ಕುರಿತು ಮಾತನಾಡಲಿದ್ದಾರೆ.

ಮಾಜಿ ಸಂಸದ ಬಸವರಾಜ ಪಾಟೀಲ ಸೇಡಂ ಹಾಗೂ ಮುಂಬೈನ ಹಿರಿಯ ಚಿತ್ರಕಲಾವಿದ ಸುಹಾಸ ಬಹುಲ್ಕರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಹಿರಿಯ ವೈದ್ಯ ಸಾಹಿತಿ ಡಾ. ಪಿ.ಎಸ್. ಶಂಕರ, ಹಿರಿಯ ಶಿಲ್ಪಕಲಾವಿದ ವೆಂಕಟಾಚಲಪತಿ ಹಾಗೂ ಖ್ಯಾತ ಚಿತ್ರಕಲಾವಿದ ಡಾ. ವಿ.ಜಿ. ಅಂದಾನಿ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ನಾಡೋಜ ಡಾ. ಜೆ.ಎಸ್. ಖಂಡೇರಾವ್ ಪ್ರತಿಷ್ಠಾನದ ಅಧ್ಯಕ್ಷ ಡಾ. ಪ್ರಭುರಾವ ಬಿ. ಕಾಂತಾ ಹಾಗೂ ಗ್ರಂಥದ ಲೇಖಕ ಡಾ. ಅಶೋಕ ಶಟಕಾರ ಉಪಸ್ಥಿತರಿರಲಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಗ್ರಂಥದ ಲೇಖಕ ಡಾ. ಅಶೋಕ ಶಟಕಾರ, ಓಂ ಪ್ರಿಂಟರ್ಸ್‌ನ ನೀಲಕಂಠ ಸಿ. ಬಿರಾದಾರ, ರಾಮಲಿಂಗ ಬೆಳಕೋಟೆ ಹಾಗೂ ಹಿರಿಯ ಶಿಲ್ಪಕಲಾವಿದ ಮಾನಯ್ಯ ಬಡಿಗೇರ ಅವರನ್ನು ವಿಶೇಷವಾಗಿ ಸನ್ಮಾನಿಸಲಾಗುವುದು ಎಂದು ಬಸವರಾಜ ಖಂಡೇರಾವ್ ತಿಳಿಸಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ನಾಗರಿಕ ಸಭ್ಯತೆ, ಹೊಣೆಗಾರಿಕೆ ಮತ್ತು ಸಾಮಾಜಿಕ ಮಾಧ್ಯಮಗಳು

ತಂತ್ರಜ್ಞಾನ ನಮ್ಮ ಕೈಗೆ ಅಪಾರ ಶಕ್ತಿಯನ್ನು ಕೊಟ್ಟಿದೆ. ಆ ಶಕ್ತಿಯನ್ನು ವಿವೇಚನೆಯಿಂದ ಬಳಸುವ ವಿವೇಕವನ್ನು ಬೆಳೆಸಿಕೊಳ್ಳಬೇಕು. ದುರಾಸೆಗಳಿಗೆ ಇತಿಮಿತಿಗಳಿರಬೇಕು. ಸಾಮಾಜಿಕ ಮಾಧ್ಯಮಗಳು ಜನರನ್ನು ಪರಸ್ಪರ ಗೌರವಿಸುವಂತೆ ಮಾಡುವ ವೇದಿಕೆಗಳಾಗಬೇಕಾದರೆ, ನಾಗರಿಕ ಸಭ್ಯತೆಯನ್ನು ವೈಯಕ್ತಿಕ ಆಯ್ಕೆಯಾಗಿ ಮಾತ್ರವಲ್ಲ, ಸಾಮಾಜಿಕ ಹೊಣೆಗಾರಿಕೆಯಾಗಿಯೂ ಸ್ವೀಕರಿಸಬೇಕು.

ಇಂದಿನ ಡಿಜಿಟಲ್ ಯುಗದಲ್ಲಿ ಸಾಮಾಜಿಕ ಮಾಧ್ಯಮಗಳ ಪಾತ್ರ ಬಹಳ ಮುಖ್ಯವಾಗಿದೆ. ಅವು ಕೇವಲ ಸಂವಹನದ ಸಾಧನಗಳಾಗಿ ಉಳಿದಿಲ್ಲ. ಅವು ಜನರ ಬದುಕಿನ ಭಾಗವಾಗಿ, ಸಮಾಜದ ಪ್ರತಿಬಿಂಬವಾಗಿ, ಸಮಾಜವನ್ನು ರೂಪಿಸುವ ಶಕ್ತಿಯಾಗಿ ಮಾರ್ಪಟ್ಟಿವೆ.

ಪ್ರಜಾಪ್ರಭುತ್ವದಲ್ಲಿ ಅಭಿವ್ಯಕ್ತಿ ಸ್ವಾತಂತ್ರ್ಯ ಅತ್ಯಂತ ಮಹತ್ವದ ಮೂಲಭೂತ ಹಕ್ಕು. ಪ್ರಭುತ್ವವನ್ನು ಪ್ರಶ್ನಿಸುವುದು, ಅಧಿಕಾರಸ್ಥರನ್ನು ಟೀಕಿಸುವುದು, ಅನ್ಯಾಯದ ವಿರುದ್ಧ ಧ್ವನಿ ಎತ್ತುವುದು ಮತ್ತು ಜನಪ್ರತಿನಿಧಿಗಳ ಹೊಣೆಗಾರಿಕೆಯನ್ನು ನೆನಪಿಸುವುದು- ಆರೋಗ್ಯಕರ ಪ್ರಜಾಪ್ರಭುತ್ವದ ಲಕ್ಷಣಗಳು.

ಸಾಮಾಜಿಕ ಮಾಧ್ಯಮಗಳು ಈಗ ಈ ಅವಕಾಶಗಳನ್ನು ಸಾಮಾನ್ಯ ನಾಗರಿಕರಿಗೂ ವಿಸ್ತರಿಸಿವೆ. ಸಾಂಪ್ರದಾಯಿಕ ಮಾಧ್ಯಮಗಳಲ್ಲಿ ಅವಕಾಶ ಸಿಗದವರಿಗೂ ತಮ್ಮ ಅಭಿಪ್ರಾಯಗಳನ್ನು ಸಾರ್ವಜನಿಕವಾಗಿ ವ್ಯಕ್ತಪಡಿಸಲು ವೇದಿಕೆಯೊದಗಿಸಿವೆ. ಆದರೆ ಈ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಮತ್ತೊಬ್ಬರ ಘನತೆಯನ್ನು ಹಾಳುಮಾಡುವ ಪರವಾನಗಿ ಎಂದು ಭಾವಿಸಲಾಗುತ್ತಿದೆ.

ಇದಕ್ಕೆ ಉದಾಹರಣೆಯಾಗಿ ಇತ್ತೀಚಿನ ಎರಡು ಘಟನೆಗಳನ್ನು ಅವಲೋಕಿಸಬಹುದು. ಒಂದು ಜೆನ್ ಜೀ ಹೋರಾಟವಾದರೆ, ಮತ್ತೊಂದು ರಾಜ್ಯದ ಸ್ಟಿಂಗ್ ಆಪರೇಷನ್.

ನೀಟ್ ಪ್ರಶ್ನೆಪತ್ರಿಕೆ ಸೋರಿಕೆಯಿಂದ ಬೇಸತ್ತ ದೇಶದ ಯುವಸಮೂಹ, ಪ್ರಭುತ್ವದ ವಿರುದ್ಧ ಒಮ್ಮೆಲೆ ಸ್ಫೋಟಿಸಿತು. ಸ್ಫೋಟಗೊಂಡ ಯುವಸಮೂಹ ಸಂಘಟಿತರಾಗಿದ್ದು ಇದೇ ಸಾಮಾಜಿಕ ಮಾಧ್ಯಮಗಳಿಂದ. ಡಿಜಿಟಲ್ ಯುಗದೊಂದಿಗೇ ಜನ್ಮ ತಳೆದ ಜೆನ್ ಜೀಗಳು, ಸಾಮಾಜಿಕ ಮಾಧ್ಯಮಗಳನ್ನು ಸಂವಹನದ ಸಾಧನವನ್ನಾಗಿ ಬಳಸಿಕೊಂಡರು. ಅದರ ಮೂಲಕವೇ ಹೊಸ ಬಗೆಯ ಹೋರಾಟ ಕಟ್ಟಿದರು. ಸಾರ್ವಜನಿಕ ಅಭಿಪ್ರಾಯ ರೂಪಿಸುವ, ರಾಜಕೀಯ ಚರ್ಚೆಗಳನ್ನು ಪ್ರಭಾವಿಸುವ, ಸಾಮಾಜಿಕ ಸಂಬಂಧಗಳನ್ನು ಬೆಸೆಯುವ ಮತ್ತು ಪ್ರಜಾಸತ್ತಾತ್ಮಕ ಸಂವಾದಕ್ಕೆ ವೇದಿಕೆಯಾಗುವ ಶಕ್ತಿಯುತ ಮಾಧ್ಯಮವನ್ನಾಗಿ ಮಾರ್ಪಡಿಸಿಕೊಂಡರು. ಪ್ರಭುತ್ವದ ಮೇಲೆ ಒತ್ತಡ ತಂದು, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ಪಡೆಯುವ ಮೂಲಕ ಯಶಸ್ಸನ್ನೂ ಕಂಡರು.

ಆದರೆ, ಜೆನ್ ಜೀಗಳ ಹೋರಾಟ ಕೂಡ ಸಂಯಮದ ಎಲ್ಲೆ ಮೀರಿತು, ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ದುರುಪಯೋಗಪಡಿಸಿಕೊಂಡಿತು ಎಂದು ಸಂಘಪರಿವಾರ ಮತ್ತು ಬಿಜೆಪಿ ದೂರುಗಳ ಸುರಿಮಳೆ ಸುರಿಸಿತು. ಆ ದೂರುಗಳನ್ನು ದೃಢಪಡಿಸಲು ಪ್ರಧಾನಿ ಮೋದಿಯವರನ್ನು ಸಾರ್ವಜನಿಕವಾಗಿ ಅವಹೇಳನ ಮಾಡಿದ ಬಾಲಕಿಯೊಬ್ಬಳ ಬಾಯಿಮಾತನ್ನು ಮುಂದಿಟ್ಟಿತು. ಆಕೆಯಿಂದ ಕ್ಷಮೆ ಕೇಳಿಸಲಾಯಿತು.

ವಿಪರ್ಯಾಸಕರ ಸಂಗತಿ ಎಂದರೆ, ಸಾಮಾಜಿಕ ಮಾಧ್ಯಮಗಳನ್ನು ಟೂಲ್ ಕಿಟ್‌ನಂತೆ ಬಳಸಿದ್ದೇ ಈ ಸಂಘಪರಿವಾರ ಮತ್ತು ಬಿಜೆಪಿ. ಅದರಲ್ಲೂ ಕೋಟಿಗಟ್ಟಲೆ ಹಣ ವ್ಯಯಿಸಿ, ಐಟಿ ಅಕ್ಷೋಹಿಣಿ ಸೈನ್ಯ ಬಳಸಿ, ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರನ್ನು ಪಪ್ಪು ಎಂದು ಪ್ರತಿಷ್ಠಾಪಿಸಲು ಹೆಣಗಾಡಿತು. ಕಳೆದ ಹನ್ನೆರಡು ವರ್ಷಗಳಿಂದ ಆ ಟ್ರೋಲ್, ಮೀಮ್ಸ್ ನೋಡಿ ನಗಾಡಿದ; ವಾಟ್ಸ್ಯಾಪ್ ಸಾಹಿತ್ಯವನ್ನು ಓದಿಕೊಂಡು ಅದೇ ಸತ್ಯವೆಂದು ನಂಬಿದ ದೇಶದ ಜನರ ಮಕ್ಕಳೇ ಈಗಿನ ಜೆನ್ ಜೀಗಳು. ಈಗ ಆ ಮಕ್ಕಳು, ರಾಹುಲ್‌ರನ್ನು ಪಪ್ಪು ಮಾಡಿದವರನ್ನು ಬೆಪ್ಪರನ್ನಾಗಿ ಮಾಡಿದ್ದಾರೆ. ವಯೋಸಹಜ ಹುಮ್ಮಸ್ಸಿನಲ್ಲಿ ಕೊಂಚ ಅತಿ ಮಾಡಿರಬಹುದು. ಆದರೆ, ಹೊರದೇಶಗಳಂತೆ ವಿಧ್ವಂಸಕ ಕೃತ್ಯಗಳಲ್ಲಿ ಭಾಗಿಯಾಗಿಲ್ಲ. ದೇಶದ ಶಾಂತಿ ಸಹಬಾಳ್ವೆಗೆ ಭಂಗ ತಂದಿಲ್ಲ. ಗಾಂಧೀಯ ಮಾರ್ಗ ಬಿಟ್ಟಿಲ್ಲ.

ಆದರೆ ಇದೇ ಮಾತುಗಳನ್ನು ಸಾಮಾಜಿಕ ಮಾಧ್ಯಮಗಳ ಮೂಲಕವೇ ಹೊರಬಂದ ರಾಜ್ಯದ ಸ್ಟಿಂಗ್ ಆಪರೇಷನ್ ವಿಷಯದಲ್ಲಿ ಹೇಳುವಂತಿಲ್ಲ. ಸಂಪುಟ ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಐವರು ಸಚಿವರಿಗೆ ಸ್ಟಿಂಗ್ ಆಪರೇಷನ್ ಬಗ್ಗೆ ಎಚ್ಚರಿಕೆ ನೀಡಿದ್ದಾರೆ ಎಂಬ ಮಾಹಿತಿ ಹೊರಬಿತ್ತು. ಅದರ ಮುಂದುವರೆದ ಭಾಗವಾಗಿ, ಕೇಂದ್ರ ಮಂತ್ರಿ ಎಚ್.ಡಿ. ಕುಮಾರಸ್ವಾಮಿಯವರು, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಲು ಸ್ಟಿಂಗ್ ಆಪರೇಷನ್ ಮಾಡಲಾಗಿದೆ, ತನಿಖೆಯಾಗಲಿ ಎಂದರು. ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡಿದ ವಿಡಿಯೋ ಕಂಡ ಸಿದ್ದರಾಮಯ್ಯನವರು, ಕೋರ್ಟಿನಿಂದ ಸ್ಟೇ ತಂದರು.

ರಾಜಕಾರಣದ ಅಂಗಳದಲ್ಲಿ ಅಧಿಕಾರಕ್ಕಾಗಿ ನಡೆದ, ನಡೆಯುತ್ತಿರುವ ಸ್ಟಿಂಗ್ ಆಪರೇಷನ್ ಅಸಹ್ಯಕ್ಕೆ ಸಿದ್ದರಾಮಯ್ಯನವರು ಸ್ಟೇ ತಂದರೂ, ಸಾಮಾಜಿಕ ಮಾಧ್ಯಮಗಳಲ್ಲಿ ಯಾವ ನಿರ್ಬಂಧವೂ ಇಲ್ಲದೆ ಹಂಚಿಕೆಯಾಗತೊಡಗಿತು. ಸಾಮಾಜಿಕ ಮಾಧ್ಯಮಗಳ ಸಮಸ್ಯೆ ಎಂದರೆ ಗಮನ ಸೆಳೆಯುವ ಹಂಬಲ. ಹೆಚ್ಚು ವೀಕ್ಷಣೆಗಳು, ಪ್ರತಿಕ್ರಿಯೆಗಳು, ಹಂಚಿಕೆಗಳು ಮತ್ತು ಅನುಯಾಯಿಗಳನ್ನು ಗಳಿಸುವ ಕೆಟ್ಟ ಸ್ಪರ್ಧೆ.

ಅದರ ಪರಿಣಾಮವಾಗಿ ಸುಳ್ಳು ಸುದ್ದಿಯೊಂದು ಕ್ಷಣಾರ್ಧದಲ್ಲಿ ಸಾವಿರಾರು ಜನರನ್ನು ತಲುಪಬಹುದು. ಅದರ ಸತ್ಯಾಸತ್ಯತೆ ತಿಳಿಯುವ ಹೊತ್ತಿಗೆ ಅದು ಸಾರ್ವಜನಿಕ ಅಭಿಪ್ರಾಯವನ್ನು ಪ್ರಭಾವಿಸಬಹುದು. ವ್ಯಕ್ತಿಯ ಗೌರವಕ್ಕೆ ಹಾನಿ ಮಾಡಬಹುದು ಅಥವಾ ಸಾಮಾಜಿಕ ಉದ್ವಿಗ್ನತೆಯನ್ನು ಹೆಚ್ಚಿಸಬಹುದು. ನಂತರ ನೀಡುವ ಸ್ಪಷ್ಟೀಕರಣಕ್ಕೆ ಆರಂಭದ ಸುಳ್ಳಿನಷ್ಟು ಮಹತ್ವ ಸಿಗದೇ ಹೋಗಬಹುದು.

ಸಾಮಾಜಿಕ ಮಾಧ್ಯಮಗಳ ಆಯ್ಕೆಯ ಅವಕಾಶ ನಮ್ಮ ಕೈಯಲ್ಲಿಯೇ ಇದೆ. ಆದ್ದರಿಂದ, ಯಾವುದೇ ಸುದ್ದಿ/ಚಿತ್ರ/ವಿಡಿಯೋವನ್ನು ಹಂಚಿಕೊಳ್ಳುವ ಮೊದಲು ಅದರ ಮೂಲವನ್ನು ಪರಿಶೀಲಿಸುವುದು ಬಹಳ ಮುಖ್ಯ. ಹರಿದುಬಂದ ಮಾಹಿತಿ-ಚಿತ್ರಗಳನ್ನು ನೈಜವೆಂದು ನಂಬದಿರುವುದು ಮತ್ತು ದೃಢೀಕರಿಸದ ಆರೋಪಗಳನ್ನು ಮುಂದಕ್ಕೆ ಕಳುಹಿಸದಿರುವುದು ಪ್ರತಿಯೊಬ್ಬ ಡಿಜಿಟಲ್ ನಾಗರಿಕನ ಜವಾಬ್ದಾರಿಯಾಗಬೇಕಾದ್ದು ಇನ್ನೂ ಮುಖ್ಯ.

ಡಿಜಿಟಲ್ ನಾಗರಿಕತೆಯನ್ನು ಬೆಳೆಸುವುದು ಕೇವಲ ತಂತ್ರಜ್ಞಾನ ಕಂಪನಿಗಳ ಅಥವಾ ಸರ್ಕಾರದ ಜವಾಬ್ದಾರಿಯಲ್ಲ. ಕುಟುಂಬ, ಶಿಕ್ಷಣ ಸಂಸ್ಥೆಗಳು, ಮಾಧ್ಯಮಗಳು, ರಾಜಕೀಯ ನಾಯಕರು ಮತ್ತು ವಿಚಾರವಂತರೂ ಇದರಲ್ಲಿ ಪಾಲುದಾರರು. ಮಕ್ಕಳಿಗೆ ಮೊಬೈಲ್ ಬಳಕೆಯ ನಿಯಮಗಳನ್ನು ಕಲಿಸುವಷ್ಟೇ ಮುಖ್ಯವಾಗಿ, ಆನ್‌ಲೈನ್‌ನಲ್ಲಿ ಮತ್ತೊಬ್ಬರೊಂದಿಗೆ ಹೇಗೆ ವರ್ತಿಸಬೇಕು ಎಂಬುದನ್ನೂ ಹೇಳಿಕೊಡಬೇಕು. ಇನ್ನೊಬ್ಬರ ಗೌಪ್ಯತೆಯನ್ನು ಗೌರವಿಸುವುದು ಡಿಜಿಟಲ್ ಶಿಕ್ಷಣದ ಭಾಗವಾಗಬೇಕು. ಸಾಮಾಜಿಕ ಮಾಧ್ಯಮಗಳಲ್ಲಿ ಕಾಣುವ ಅಸಭ್ಯತೆ, ಅಸಹನೆ ಮತ್ತು ಅಸೂಯೆ ಕೇವಲ ತಂತ್ರಜ್ಞಾನದ ಸಮಸ್ಯೆಯಲ್ಲ. ಅದನ್ನು ಅಷ್ಟೇ ಸುಲಭವಾಗಿ ಸರಳೀಕರಿಸಿ ಕೈತೊಳೆದುಕೊಳ್ಳಲು ಸಾಧ್ಯವಿಲ್ಲ. ಅವು ನಮ್ಮ ಸಾಮಾಜಿಕ ಸಂಬಂಧಗಳು, ರಾಜಕೀಯ ಸಂಸ್ಕೃತಿ, ಸಾರ್ವಜನಿಕ ಸಂವಾದ ಮತ್ತು ನೈತಿಕ ಮೌಲ್ಯಗಳ ಸ್ಥಿತಿಯನ್ನೂ ಪ್ರತಿಬಿಂಬಿಸುತ್ತವೆ ಎಂಬುದನ್ನು ಅರಿಯಬೇಕು.

ತಂತ್ರಜ್ಞಾನ ನಮ್ಮ ಕೈಗೆ ಅಪಾರ ಶಕ್ತಿಯನ್ನು ಕೊಟ್ಟಿದೆ. ಆ ಶಕ್ತಿಯನ್ನು ವಿವೇಚನೆಯಿಂದ ಬಳಸುವ ವಿವೇಕವನ್ನು ಬೆಳೆಸಿಕೊಳ್ಳಬೇಕು. ದುರಾಸೆಗಳಿಗೆ ಇತಿಮಿತಿಗಳಿರಬೇಕು. ಸಾಮಾಜಿಕ ಮಾಧ್ಯಮಗಳು ಜನರನ್ನು ಪರಸ್ಪರ ಗೌರವಿಸುವಂತೆ ಮಾಡುವ ವೇದಿಕೆಗಳಾಗಬೇಕಾದರೆ, ನಾಗರಿಕ ಸಭ್ಯತೆಯನ್ನು ವೈಯಕ್ತಿಕ ಆಯ್ಕೆಯಾಗಿ ಮಾತ್ರವಲ್ಲ, ಸಾಮಾಜಿಕ ಹೊಣೆಗಾರಿಕೆಯಾಗಿಯೂ ಸ್ವೀಕರಿಸಬೇಕು. ಸ್ವೀಕರಿಸಲು ಸಾಧ್ಯವಾಗದ ಸಂದರ್ಭ ಸೃಷ್ಟಿಯಾದರೆ, ಸರ್ಕಾರ ಕಟ್ಟುನಿಟ್ಟಿನ, ನ್ಯಾಯಸಮ್ಮತ ನಿಯಮಗಳನ್ನು ಜಾರಿಗೊಳಿಸಬೇಕು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಮೀಸಲಾತಿಗೆ ಮತಾಂತರದ ಬೇಲಿ: ಸುಪ್ರೀಂ ಹೊಸ ಆದೇಶದಲ್ಲಿ ಸಾಂವಿಧಾನಿಕ ವಿರೋಧಾಭಾಸ!



ಧರ್ಮ ಬದಲಾದರೆ ಸಾಮಾಜಿಕ ಹಿಂದುಳಿದಿರುವಿಕೆಯೂ ಅಳಿಸಿಹೋಗುತ್ತದೆಯೇ? ಮಂಡಲ್ ಆಯೋಗದ 11 ಮಾನದಂಡಗಳಲ್ಲಿ ಧರ್ಮಕ್ಕೆ ಸ್ಥಾನವಿಲ್ಲದಿದ್ದರೂ, ಮತಾಂತರವನ್ನು ಮೀಸಲಾತಿಯ ಅರ್ಹತೆಗೆ ಜೋಡಿಸಿರುವುದೇಕೆ? ಇಂದಿರಾ ಸಾಹ್ನಿ ತೀರ್ಪಿಗೆ ವಿರೋಧಾಭಾಸವಾಗಿದೆ ಸುಪ್ರೀಂ ಕೋರ್ಟ್‌ನ ಹೊಸ ತೀಪು!

1992ರಲ್ಲಿ ಸುಪ್ರೀಂ ಕೋರ್ಟ್‌ನ ಒಂಬತ್ತು ನ್ಯಾಯಮೂರ್ತಿಗಳ ಸಾಂವಿಧಾನಿಕ ಪೀಠವು ಒಬಿಸಿ ಮೀಸಲಾತಿಯ ಸಾಂವಿಧಾನಿಕ ಮಾನ್ಯತೆಯನ್ನು ಎತ್ತಿಹಿಡಿದಿತ್ತು. ವ್ಯಕ್ತಿಯ ಧಾರ್ಮಿಕ ಗುರುತಿಗಿಂತ ಆತ/ಆಕೆ ಎದುರಿಸುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಹಿಂದುಳಿದಿರುವಿಕೆಯನ್ನು ಗುರುತಿಸುವುದೇ ಮೀಸಲಾತಿಯ ಮೂಲ ಉದ್ದೇಶ ಎಂಬ ತತ್ವಕ್ಕೆ ಮಹತ್ವ ನೀಡಿತ್ತು. ಆದರೆ, 34 ವರ್ಷಗಳ ನಂತರ, ಅಕ್ಟೋಬರ್ 15ರಂದು ಸುಪ್ರೀಂ ಕೋರ್ಟ್ ನೀಡಿರುವ ಹೊಸ ತೀರ್ಪು ಒಬಿಸಿ ಮೀಸಲಾತಿ ಮತ್ತು ಧಾರ್ಮಿಕ ಮತಾಂತರದ ನಡುವೆ ಹೊಸ ಕಾನೂನಾತ್ಮಕ ಗಡಿಯನ್ನು ನಿರ್ಮಿಸಿದೆ.

ತಮಿಳುನಾಡು ಸರ್ಕಾರ ಸಮೀರ್ ಅಹಮದ್ ನಡುವಿನ ಪ್ರಕರಣದಲ್ಲಿ ನ್ಯಾಯಮೂರ್ತಿಗಳಾದ ಪ್ರಶಾಂತ್ ಕುಮಾರ್ ಮಿಶ್ರಾ ಮತ್ತು ಚಂದ್ರಶೇಖರ್ ಅವರ ದ್ವಿಸದಸ್ಯ ಪೀಠವು, ''ಹಿಂದು ಧರ್ಮದಿಂದ ಇಸ್ಲಾಂಗೆ ಮತಾಂತರಗೊಂಡ ವ್ಯಕ್ತಿಯು ತನ್ನ ಹಿಂದಿನ ಜಾತಿಯ ಹಿಂದುಳಿದಿರುವಿಕೆಯ ಆಧಾರದಲ್ಲಿ ಮುಸ್ಲಿಂ ಹಿಂದುಳಿದ ವರ್ಗದ ಮೀಸಲಾತಿಯನ್ನು ಸ್ವಯಂಚಾಲಿತವಾಗಿ ಪಡೆಯಲು ಸಾಧ್ಯವಿಲ್ಲ'' ಎಂದು ತೀರ್ಪು ನೀಡಿದೆ.

ಈ ತೀರ್ಪು ಪ್ರಕಟವಾದ ಬಳಿಕ, ದೇಶದ ಸಾಮಾಜಿಕ ನ್ಯಾಯದ ವ್ಯವಸ್ಥೆಯಲ್ಲಿ, ''ಧರ್ಮ ಬದಲಾಯಿಸಿದ ತಕ್ಷಣ ಅವರ ಸಾಮಾಜಿಕ ಹಿಂದುಳಿದಿರುವಿಕೆಯೂ ಕೊನೆಗೊಳ್ಳುತ್ತದೆಯೇ? ಶತಮಾನಗಳಿಂದ ಅನುಭವಿಸಿದ ಜಾತಿ ತಾರತಮ್ಯ, ಬಡತನ, ಶೈಕ್ಷಣಿಕ ವಂಚನೆ ಹಾಗೂ ಸಾಮಾಜಿಕ ಅಪಮಾನಗಳು ಮತಾಂತರದಿಂದಲೇ ಅಳಿಸಿಹೋಗುತ್ತವೆಯೇ?'' ಎಂಬ ಮೂಲಭೂತ ಪ್ರಶ್ನೆಯನ್ನು ಮುನ್ನೆಲೆ ತಂದಿದೆ.

ಸಮೀರ್ ಅಹಮದ್ ಪ್ರಕರಣದಲ್ಲಿ ನಡೆದಿದ್ದೇನು?

ತಮಿಳುನಾಡಿನ ತೂತುಕುಡಿ ಜಿಲ್ಲೆಯಲ್ಲಿ ಹಿಂದು ಕುಟುಂಬದಲ್ಲಿ ಜನಿಸಿದ ಪರಮಶಿವರ ಎಂಬವರು 2015ರಲ್ಲಿ ಇಸ್ಲಾಂ ಧರ್ಮಕ್ಕೆ ಮತಾಂತರಗೊಂಡು ಸಮೀರ್ ಅಹಮದ್ ಎಂದು ಹೆಸರು ಬದಲಿಸಿಕೊಂಡಿದ್ದರು. ಬಳಿಕ ತಮ್ಮನ್ನು ಮುಸ್ಲಿಂ ಲಬ್ಬೈ ಸಮುದಾಯಕ್ಕೆ ಸೇರಿದವರೆಂದು ಗುರುತಿಸಿಕೊಂಡು ಹಿಂದುಳಿದ ವರ್ಗದ ಪ್ರಮಾಣಪತ್ರಕ್ಕಾಗಿ ಅರ್ಜಿ ಸಲ್ಲಿಸಿದ್ದರು.

ಆದರೆ, ಸ್ಥಳೀಯ ಕಂದಾಯ ಅಧಿಕಾರಿಗಳು ಅರ್ಜಿಯನ್ನು ತಿರಸ್ಕರಿಸಿದರು. ಇಸ್ಲಾಂ ಧರ್ಮಕ್ಕೆ ಮತಾಂತರಗೊಂಡ ಮಾತ್ರಕ್ಕೆ ಲಬ್ಬೈ ಎಂಬ ನಿರ್ದಿಷ್ಟ ಹಿಂದುಳಿದ ಸಮುದಾಯದ ಸದಸ್ಯತ್ವ ದೊರೆಯುವುದಿಲ್ಲ ಎಂದು ಅಧಿಕಾರಿಗಳು ಹೇಳಿದ್ದರು.

ಇದೇ ಸಮಯದಲ್ಲಿ, 2024ರ ಮಾರ್ಚ್ 9ರಂದು ತಮಿಳುನಾಡು ಸರ್ಕಾರವು, ''ಹಿಂದು ಸಮಾಜದ ಹಿಂದುಳಿದ ವರ್ಗಗಳು, ಅತ್ಯಂತ ಹಿಂದುಳಿದ ವರ್ಗಗಳು, ಅಧಿಸೂಚನೆಯಿಂದ ಹೊರಗಿಡಲಾದ ಸಮುದಾಯಗಳು ಹಾಗೂ ಪರಿಶಿಷ್ಟ ಜಾತಿಗಳಿಂದ ಇಸ್ಲಾಂಗೆ ಮತಾಂತರಗೊಂಡವರಿಗೆ ನಿರ್ದಿಷ್ಟ ಷರತ್ತುಗಳಡಿ ಮುಸ್ಲಿಂ ಹಿಂದುಳಿದ ವರ್ಗದ ಪ್ರಮಾಣಪತ್ರ ಪಡೆಯಲು ಅವಕಾಶವಿದೆ'' ಎಂದು ಆದೇಶವನ್ನೂ ಹೊರಡಿಸಿತ್ತು.

ಆದರೆ, ಸರ್ಕಾರದ ಈ ಆದೇಶವನ್ನು ಮದ್ರಾಸ್ ಹೈಕೋರ್ಟ್ ರದ್ದುಗೊಳಿಸಿತು. ಅದನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಮೆಟ್ಟಿಲೇರಿತ್ತು. ಆದರೆ, ಅಕ್ಟೋಬರ್ 15ರಂದು ತೀರ್ಪು ನೀಡಿದ ಸುಪ್ರೀಂ ಕೋರ್ಟ್ ಕೂಡ ಹೈಕೋರ್ಟ್‌ನ ತೀರ್ಪನ್ನೇ ಎತ್ತಿಹಿಡಿಯಿತು.

''ಮೀಸಲಾತಿ ಎನ್ನುವುದು ವ್ಯಕ್ತಿಯೊಬ್ಬರು ಒಂದು ಧರ್ಮದಿಂದ ಮತ್ತೊಂದು ಧರ್ಮಕ್ಕೆ ತಮ್ಮೊಂದಿಗೆ ಕೊಂಡೊಯ್ಯಬಹುದಾದ ವೈಯಕ್ತಿಕ ಸೌಲಭ್ಯವಲ್ಲ. ಅದು ಅಧಿಸೂಚಿತ ನಿರ್ದಿಷ್ಟ ಹಿಂದುಳಿದ ಸಮುದಾಯದ ಸದಸ್ಯತ್ವಕ್ಕೆ ಸಂಬಂಧಿಸಿದ ಸಾಂವಿಧಾನಿಕ ವ್ಯವಸ್ಥೆ'' ಎಂದು ಕೋರ್ಟ್ ಹೇಳಿದೆ.

ಆದರೆ, ನ್ಯಾಯಾಲಯದ ಈ ನಿಲುವು 35 ವರ್ಷಗಳ ಹಿಂದಿನ ಇಂದಿರಾ ಸಾಹ್ನಿ ಪ್ರಕರಣದಲ್ಲಿ ಸ್ವತಃ ಸುಪ್ರೀಂ ಕೋರ್ಟ್ ನೀಡಿದ್ದ ತೀರ್ಪಿನೊಂದಿಗೆ ವಿರೋಧಾಭಾಸವನ್ನು ಹೊಂದಿದೆ.

ಇಂದಿರಾ ಸಾಹ್ನಿ ತೀರ್ಪಿನ ಧಾರ್ಮಿಕ ತಟಸ್ಥತೆಯ ತತ್ವವೇನು?

1990ರಲ್ಲಿ ವಿ.ಪಿ. ಸಿಂಗ್ ಸರ್ಕಾರ ಮಂಡಲ್ ಆಯೋಗದ ಶಿಫಾರಸುಗಳಂತೆ ಕೇಂದ್ರ ಸರ್ಕಾರಿ ಉದ್ಯೋಗಗಳಲ್ಲಿ ಒಬಿಸಿಗಳಿಗೆ 27%ರಷ್ಟು ಮೀಸಲಾತಿ ಜಾರಿಗೊಳಿಸಲು ಮುಂದಾಗಿತ್ತು. ಇದನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಇಂದಿರಾ ಸಾಹ್ನಿ ಎಂಬವರು ಅರ್ಜಿ ಸಲ್ಲಿಸಿದ್ದರು. ಈ ಇಂದಿರಾ ಸಾಹ್ನಿ ಭಾರತ ಒಕ್ಕೂಟ ಪ್ರಕರಣದ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್‌ನ ಒಂಬತ್ತು ನ್ಯಾಯಮೂರ್ತಿಗಳ ಪೀಠವು ಒಬಿಸಿ ಮೀಸಲಾತಿಯನ್ನು ಎತ್ತಿಹಿಡಿದು 1992ರ ನವೆಂಬರ್ 16ರಂದು ಐತಿಹಾಸಿಕ ತೀರ್ಪು ನೀಡಿತು.

''ಸಾಮಾಜಿಕ ಹಿಂದುಳಿದಿರುವಿಕೆಯನ್ನು ಗುರುತಿಸಲು ಜಾತಿಯು ಪ್ರಮುಖ ಸೂಚಕವಾಗಬಹುದು'' ಎಂದು ಕೋರ್ಟ್ ಹೇಳಿತು. ಹಿಂದುಯೇತರ ಧಾರ್ಮಿಕ ಸಮುದಾಯಗಳಲ್ಲಿಯೂ ಸಾಮಾಜಿಕ ಹಿಂದುಳಿದಿರುವಿಕೆ ಅಸ್ತಿತ್ವದಲ್ಲಿದೆ ಎಂಬುದಕ್ಕೆ ಮನ್ನಣೆ ನೀಡಿತು. ಮಾತ್ರವಲ್ಲದೆ, ಕೆನೆಪದರದವರನ್ನು (ಕ್ರೀಮಿ ಲೇಯರ್) ಮೀಸಲಾತಿಯಿಂದ ಹೊರಗಿಡುವ ತತ್ವಕ್ಕೂ ಮಾನ್ಯತೆ ನೀಡಿತು.

ನ್ಯಾಯಮೂರ್ತಿ ಕೆ. ರಾಮಸ್ವಾಮಿ ಅವರು ''ಸಾಂಪ್ರದಾಯಿಕ ವೃತ್ತಿ, ವಾಸಸ್ಥಳ, ಶಿಕ್ಷಣದ ಕೊರತೆ, ಬಡತನ ಮೊದಲಾದ ಅಂಶಗಳ ಮೂಲಕ ಮುಸ್ಲಿಂ, ಕ್ರೈಸ್ತ ಹಾಗೂ ಇತರ ಧಾರ್ಮಿಕ ಸಮುದಾಯಗಳ ಹಿಂದುಳಿದಿರುವಿಕೆಯನ್ನು ಗುರುತಿಸಬಹುದು'' ಎಂದು ಪ್ರತಿಪಾದಿಸಿದ್ದರು.

ನ್ಯಾಯಮೂರ್ತಿ ಟಿ.ಕೆ. ಥಾಮಸ್ ಅವರ ಅಭಿಪ್ರಾಯವು ಇನ್ನಷ್ಟು ಗಮನಾರ್ಹವಾಗಿತ್ತು. ''ಧರ್ಮ ಬದಲಾಯಿಸಿದ ಕಾರಣಕ್ಕೆ ಮಾತ್ರ ಸಾಮಾಜಿಕವಾಗಿ ಹಿಂದುಳಿದ ವ್ಯಕ್ತಿಗೆ ಮೀಸಲಾತಿಯ ರಕ್ಷಣೆಯನ್ನು ನಿರಾಕರಿಸುವುದು ಜಾತ್ಯತೀತತೆಯ ಆಶಯಕ್ಕೆ ಧಕ್ಕೆ ತರಬಹುದು'' ಎಂದು ಅವರು ಕಳವಳ ವ್ಯಕ್ತಪಡಿಸಿದ್ದರು.

ಒಬಿಸಿ ವರ್ಗೀಕರಣದ 11 ಮಾನದಂಡಗಳಲ್ಲಿ ಧರ್ಮ ಎಲ್ಲಿದೆ?

1979ರಲ್ಲಿ ರಚನೆಯಾದ ಮಂಡಲ್ ಆಯೋಗವು 1980ರಲ್ಲಿ ಸಲ್ಲಿಸಿದ ವರದಿಯಲ್ಲಿ ಹಿಂದುಳಿದ ವರ್ಗಗಳನ್ನು ಗುರುತಿಸಲು 11 ಸೂಚಕಗಳನ್ನು ರೂಪಿಸಿತ್ತು. ಅವುಗಳಲ್ಲಿ ನಾಲ್ಕು ಸಾಮಾಜಿಕ, ಮೂರು ಶೈಕ್ಷಣಿಕ ಹಾಗೂ ನಾಲ್ಕು ಆರ್ಥಿಕ ಮಾನದಂಡಗಳಾಗಿದ್ದವು.

ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಹಿಂದುಳಿಯುವಿಕೆ ಗುರುತಿಸುವ ಸೂಚಕಗಳು;

ಸಾಮಾಜಿಕವಾಗಿ ಹಿಂದುಳಿದವರೆಂದು ಪರಿಗಣಿಸುವ ಜಾತಿಗಳು ಅಥವಾ ವರ್ಗಗಳು.

ಜೀವನೋಪಾಯಕ್ಕಾಗಿ ಮುಖ್ಯವಾಗಿ ದೈಹಿಕ ಶ್ರಮವನ್ನು ಅವಲಂಬಿಸಿರುವ ಸಮುದಾಯಗಳು.

ರಾಜ್ಯದ ಸರಾಸರಿಗಿಂತ ಹೆಚ್ಚಿನ ಪ್ರಮಾಣದಲ್ಲಿ 17 ವರ್ಷಕ್ಕಿಂತ ಕಡಿಮೆ ವಯಸ್ಸಿನಲ್ಲಿ ವಿವಾಹವಾಗುವವರಿರುವ ಸಮುದಾಯಗಳು. (ಗ್ರಾಮೀಣ ಮತ್ತು ನಗರ ಪ್ರದೇಶಗಳ ಪುರುಷರು ಮತ್ತು ಮಹಿಳೆಯರಿಗೆ ಆಯೋಗವು ಪ್ರತ್ಯೇಕ ವಯಸ್ಸು ಮತ್ತು ಪ್ರಮಾಣ ನಿಗದಿಪಡಿಸಿತ್ತು).

ಮಹಿಳೆಯರ ದುಡಿಮೆಯ ಭಾಗವಹಿಸುವಿಕೆ ರಾಜ್ಯದ ಸರಾಸರಿಗಿಂತ ಕನಿಷ್ಠ 25%ರಷ್ಟು ಹೆಚ್ಚಿರುವ ಸಮುದಾಯಗಳು.

5ರಿಂದ 15 ವರ್ಷದೊಳಗಿನ ಶಾಲೆಗೆ ಎಂದಿಗೂ ಹೋಗದ ಮಕ್ಕಳ ಪ್ರಮಾಣ ರಾಜ್ಯದ ಸರಾಸರಿಗಿಂತ ಕನಿಷ್ಠ 25%ರಷ್ಟು ಹೆಚ್ಚಿರುವುದು.

ಅದೇ ವಯೋಮಾನದ ಮಕ್ಕಳ ಶಾಲೆ ಬಿಡುವ ಪ್ರಮಾಣ ರಾಜ್ಯದ ಸರಾಸರಿಗಿಂತ ಕನಿಷ್ಠ 25%ರಷ್ಟು ಹೆಚ್ಚಿರುವುದು.

ಮೆಟ್ರಿಕ್ಯುಲೇಷನ್ (ಎಸ್‌ಎಸ್‌ಎಲ್‌ಸಿ) ಉತ್ತೀರ್ಣರಾದವರ ಪ್ರಮಾಣ ರಾಜ್ಯದ ಸರಾಸರಿಗಿಂತ ಕನಿಷ್ಠ 25%ರಷ್ಟು ಕಡಿಮೆಯಿರುವುದು.

ಕುಟುಂಬಗಳ ಸರಾಸರಿ ಆಸ್ತಿ ಮೌಲ್ಯ ರಾಜ್ಯದ ಸರಾಸರಿಗಿಂತ ಕನಿಷ್ಠ 25%ರಷ್ಟು ಕಡಿಮೆಯಿರುವುದು.

ಕಚ್ಚಾ ಮನೆಗಳಲ್ಲಿ ವಾಸಿಸುವ ಕುಟುಂಬಗಳ ಪ್ರಮಾಣ ರಾಜ್ಯದ ಸರಾಸರಿಗಿಂತ ಕನಿಷ್ಠ 25%ರಷ್ಟು ಹೆಚ್ಚಿರುವುದು.

50%ಕ್ಕಿಂತ ಹೆಚ್ಚು ಕುಟುಂಬಗಳು ಅರ್ಧ ಕಿಲೋಮೀಟರ್‌ಗಿಂತ ದೂರದಿಂದ ಕುಡಿಯುವ ನೀರನ್ನು ತರಬೇಕಾಗಿರುವುದು.

ದೈನಂದಿನ ಬಳಕೆ ಅಥವಾ ಉಪಭೋಗದ ಅಗತ್ಯಗಳಿಗಾಗಿ ಸಾಲ ಪಡೆದ ಕುಟುಂಬಗಳ ಪ್ರಮಾಣ ರಾಜ್ಯದ ಸರಾಸರಿಗಿಂತ ಕನಿಷ್ಠ 25%ರಷ್ಟು ಹೆಚ್ಚಿರುವುದು

ಈ ಸೂಚಕಗಳಿಗೆ ಸಾಮಾಜಿಕವಾಗಿ ತಲಾ ಮೂರು, ಶೈಕ್ಷಣಿಕವಾಗಿ ತಲಾ ಎರಡು ಮತ್ತು ಆರ್ಥಿಕವಾಗಿ ತಲಾ ಒಂದು ಅಂಕ ನಿಗದಿಪಡಿಸಲಾಗಿತ್ತು. ಒಟ್ಟು 22 ಅಂಕಗಳಲ್ಲಿ ಕನಿಷ್ಠ 11 ಅಂಕ ಗಳಿಸಿದ ಸಮುದಾಯಗಳನ್ನು ಹಿಂದುಳಿದವರೆಂದು ಗುರುತಿಸುವ ವಿಧಾನ ಅನುಸರಿಸಲಾಗಿತ್ತು.

ಗಮನಾರ್ಹ ಸಂಗತಿಯೆಂದರೆ, ಈ 11 ಮಾನದಂಡಗಳಲ್ಲಿ ವ್ಯಕ್ತಿಯ ಧರ್ಮವನ್ನು ಹಿಂದುಳಿದಿರುವಿಕೆಯ ಸ್ವತಂತ್ರ ಮಾನದಂಡವನ್ನಾಗಿ ಪರಿಗಣಿಸಿರಲಿಲ್ಲ.

ಮತಾಂತರಗೊಂಡವರ ಹಿಂದುಳಿದಿರುವಿಕೆಯನ್ನೂ ಗುರುತಿಸಿತ್ತು ಮಂಡಲ್ ಆಯೋಗ!

ಹಿಂದುಯೇತರ ಹಿಂದುಳಿದ ವರ್ಗಗಳನ್ನು ಗುರುತಿಸುವಾಗ ಮಂಡಲ್ ಆಯೋಗವು ಎರಡು ವರ್ಗಗಳನ್ನು ಪರಿಗಣಿಸಿತ್ತು. ಅಸ್ಪೃಶ್ಯತೆ ಅನುಭವಿಸುತ್ತಿದ್ದ ಸಮುದಾಯಗಳಿಂದ ಇತರ ಧರ್ಮಗಳಿಗೆ ಮತಾಂತರಗೊಂಡವರು ಮತ್ತು ಹಿಂದು ಸಮಾಜದಲ್ಲಿನ ಸಮಾನ ವೃತ್ತಿ ಸಮುದಾಯಗಳು ಒಬಿಸಿ ಪಟ್ಟಿಯಲ್ಲಿರುವಂತಹ ಹಿಂದುಯೇತರ ಸಾಂಪ್ರದಾಯಿಕ ವೃತ್ತಿ ಸಮುದಾಯಗಳು.

ವರದಿಯು ಧೋಬಿ, ತೇಲಿ, ನಾಯೀ, ಕುಂಬಾರ, ಲೋಹಾರ್, ದರ್ಜಿ ಮೊದಲಾದ ಸಮುದಾಯಗಳನ್ನು ಉದಾಹರಣೆಯಾಗಿ ಪರಿಗಣಿಸಿತ್ತು. ಅಂದರೆ, ಧರ್ಮ ಬದಲಾದರೂ ಸಾಮಾಜಿಕ ಶ್ರೇಣೀಕರಣ ಮತ್ತು ವೃತ್ತಿ ಆಧಾರಿತ ಹಿಂದುಳಿದಿರುವಿಕೆ ಮುಂದುವರಿಯಬಹುದು ಎಂಬ ವಾಸ್ತವವನ್ನು ಮಂಡಲ್ ಆಯೋಗ ಗುರುತಿಸಿತ್ತು.

ಹೀಗಿರುವಾಗ ಮತಾಂತರಗೊಂಡ ಕಾರಣಕ್ಕಾಗಿ, ಅವರ ಹಿಂದಿನ ಸಾಮಾಜಿಕ ಹಿಂದುಳಿದಿರುವಿಕೆಯೂ ಅಂತ್ಯಗೊಂಡು, ಅವರು ಮುಂದುವರೆದಿದ್ದಾರೆ ಎಂದು ಪರಿಗಣಿಸಲು ಸಾಧ್ಯವಿಲ್ಲ.

ಮೀಸಲಾತಿ ಪ್ರಮಾಣಪತ್ರದಲ್ಲಿಯೂ ಧರ್ಮ ಮುಖ್ಯವಲ್ಲ!

ಕೇಂದ್ರ ಸರ್ಕಾರದ ಕೆಲವು ಪ್ರಮಾಣಿತ ಒಬಿಸಿ ಪ್ರಮಾಣಪತ್ರ ನಮೂನೆಗಳಲ್ಲಿ ಅರ್ಜಿದಾರರ ಹೆಸರು, ವಾಸಸ್ಥಳ, ಅಧಿಸೂಚಿತ ಸಮುದಾಯ ಮತ್ತು ಕೆನೆಪದರದ ಅರ್ಹತೆಗೆ ಮಹತ್ವ ನೀಡಲಾಗುತ್ತದೆ. ಆದರೆ, ಧರ್ಮವನ್ನು ದಾಖಲಿಸಲು ಪ್ರತ್ಯೇಕ ಕಾಲಂಅನ್ನು ಸೇರಿಸಿಲ್ಲ. ಅಂತೆಯೇ, ರಾಜ್ಯಗಳ ಎಲ್ಲ ಅರ್ಜಿ ನಮೂನೆಗಳಲ್ಲಿಯೂ ಧರ್ಮದ ವಿವರ ಕೇಳುವುದಿಲ್ಲ. ಅಂದರೆ, ಒಬಿಸಿ ಪ್ರಮಾಣಪತ್ರದ ಮೂಲ ಉದ್ದೇಶ ವ್ಯಕ್ತಿಯ ಧಾರ್ಮಿಕ ನಂಬಿಕೆಯನ್ನು ಪ್ರಮಾಣೀಕರಿಸುವುದಲ್ಲ; ಅಧಿಸೂಚಿತ ಹಿಂದುಳಿದ ಸಮುದಾಯದ ಸದಸ್ಯತ್ವವನ್ನು ದೃಢೀಕರಿಸುವುದೇ ಆಗಿದೆ.

ಮತಾಂತರಗೊಂಡ ವ್ಯಕ್ತಿಯ ಸಾಮಾಜಿಕ ಹಿಂದುಳಿದಿರುವಿಕೆ ಮುಂದುವರಿದಿದ್ದರೆ ಅದನ್ನು ಸರ್ಕಾರಗಳು ಗುರುತಿಸಬೇಕಾಗುತ್ತದೆ.

ಧರ್ಮ ಬದಲಾದರೆ ಜಾತಿ ತಾರತಮ್ಯ ಕೊನೆಗೊಳ್ಳುವುದೇ?

ಭಾರತೀಯ ಮುಸ್ಲಿಂ ಸಮಾಜದಲ್ಲಿರುವ ಅಶ್ರಫ್, ಅಜ್ಲಫ್ ಮತ್ತು ಅರ್ಜಲ್ ಎಂಬ ಸಾಮಾಜಿಕ ಶ್ರೇಣೀಕರಣಗಳು ಹಾಗೂ ಕ್ರೈಸ್ತ ಸಮುದಾಯಗಳಲ್ಲಿಯೂ ಮುಂದುವರಿದಿರುವ ಜಾತಿ ತಾರತಮ್ಯಗಳು ಸಾಮಾಜಿಕ ವಾಸ್ತವವನ್ನು ತೋರಿಸುತ್ತವೆ.

ಧಾರ್ಮಿಕ ಮತಾಂತರದಿಂದ ವ್ಯಕ್ತಿಯ ನಂಬಿಕೆ ಬದಲಾಗಬಹುದು. ಆದರೆ, ಕುಟುಂಬದ ಆರ್ಥಿಕ ದುಸ್ಥಿತಿ, ಸಾಂಪ್ರದಾಯಿಕ ವೃತ್ತಿ, ಶೈಕ್ಷಣಿಕ ವಂಚನೆ ಹಾಗೂ ಸಾಮಾಜಿಕ ಅಪಮಾನದ ಇತಿಹಾಸ ತಕ್ಷಣವೇ ಅಳಿಸಿಹೋಗುವುದಿಲ್ಲ.

ಹೊಸ ತೀರ್ಪು ಸಹ ಭಾರತೀಯ ಮುಸ್ಲಿಂ ಸಮಾಜದಲ್ಲಿನ ಸಾಮಾಜಿಕ ಶ್ರೇಣೀಕರಣದ ಅಸ್ತಿತ್ವವನ್ನು ಗುರುತಿಸಿದೆ. ಆದರೆ ಅಂತಹ ಹಿಂದುಳಿದಿರುವಿಕೆ ಮತ್ತು ನಿರ್ದಿಷ್ಟ ಅಧಿಸೂಚಿತ ಸಮುದಾಯದ ಸದಸ್ಯತ್ವ ಎರಡೂ ಒಂದೇ ಅಲ್ಲ ಎಂಬ ಕಾನೂನಾತ್ಮಕ ವ್ಯತ್ಯಾಸವನ್ನು ಪ್ರತಿಪಾದಿಸಿದೆ.

ಇಲ್ಲಿಯೇ ಮುಖ್ಯ ವಿರೋಧಾಭಾಸವಿದೆ. ವ್ಯಕ್ತಿಯೊಬ್ಬರು ಮತಾಂತರಗೊಂಡ ನಂತರವೂ ಸಾಮಾಜಿಕವಾಗಿ ಹಿಂದುಳಿದವರಾಗಿಯೇ ಉಳಿದಿದ್ದರೂ, ಹಿಂದಿನ ಜಾತಿಯ ಆಧಾರದಲ್ಲಿ ಮೀಸಲಾತಿ ಪಡೆಯಲು ಸಾಧ್ಯವಾಗದೆ, ಹೊಸ ಧರ್ಮದ ನಿರ್ದಿಷ್ಟ ಹಿಂದುಳಿದ ಸಮುದಾಯದ ಸದಸ್ಯತ್ವವನ್ನೂ ಸಾಬೀತುಪಡಿಸಲು ಸಾಧ್ಯವಾಗದಿದ್ದರೆ ಅವರ ಸ್ಥಿತಿ ಏನು? ಸಾಮಾಜಿಕ ನ್ಯಾಯ ವ್ಯವಸ್ಥೆಯಲ್ಲಿ ಸಾಮಾಜಿಕವಾಗಿ ಹಿಂದುಳಿದ ವ್ಯಕ್ತಿಯನ್ನು ಕಾನೂನಾತ್ಮಕವಾಗಿ ಮೀಸಲಾತಿಯಿಂದ ವಂಚಿತನಾಗುವಂತೆ ಮಾಡಬಹುದೇ?

1992ರ ಇಂದಿರಾ ಸಾಹ್ನಿ ತೀರ್ಪು ಮತಾಂತರದ ನಂತರ ಪ್ರತಿಯೊಂದು ಮೀಸಲಾತಿ ಹಕ್ಕು ಸ್ವಯಂಚಾಲಿತವಾಗಿ ಮುಂದುವರಿಯುತ್ತದೆ ಎಂದು ನೇರವಾಗಿ ಹೇಳದೇ ಇದ್ದರೂ, ತೀರ್ಪಿನ ಧಾರ್ಮಿಕ ತಟಸ್ಥತೆಯು ಧರ್ಮ ಬದಲಾದರೂ, ಮೀಸಲಾತಿ ಮುಂದುವರೆಯಲು ಅವಕಾಶ ನೀಡಿತ್ತು. ಆದರೆ, ಅಕ್ಟೋಬರ್ 15ರ ತೀರ್ಪು, ಧರ್ಮ ಬದಲಾದರೆ, ಅವರಿಗೆ ಮೀಸಲಾತಿಯೇ ದೊರೆಯುವುದಿಲ್ಲ ಎಂದು ನೇರವಾಗಿ ಹೇಳಿದೆ.

ಸಂವಿಧಾನದ 25ನೇ ವಿಧಿಯು ಧಾರ್ಮಿಕ ಸ್ವಾತಂತ್ರ್ಯವನ್ನು ರಕ್ಷಿಸುತ್ತದೆ. 15(4) ಮತ್ತು 16(4)ನೇ ವಿಧಿಗಳು ಸಾಮಾಜಿಕ ನ್ಯಾಯಕ್ಕೆ ಅವಕಾಶ ಕಲ್ಪಿಸುತ್ತವೆ. ಧರ್ಮ ಬದಲಾಗಬಹುದು. ಆದರೆ, ಸಾಮಾಜಿಕ ಅಸಮಾನತೆ ಮತಾಂತರಗೊಂಡ ಕ್ಷಣದಲ್ಲೇ ಕೊನೆಗೊಳ್ಳುವುದಿಲ್ಲ. ಅದನ್ನು ಗುರುತಿಸಿ ನಿವಾರಿಸುವುದೇ ಸಾಮಾಜಿಕ ನ್ಯಾಯದ ಸಾಂವಿಧಾನಿಕ ವ್ಯವಸ್ಥೆಯ ಮೂಲ ಉದ್ದೇಶವಾಗಬೇಕು. ಆದನ್ನು ಸರ್ಕಾರಗಳು ಮತ್ತು ನ್ಯಾಯಾಲಯಗಳು ಎಚ್ಚರಿಕೆಯಿಂದ ನೋಡಬೇಕು.

ಶ್ರೇಷ್ಠ ತೋಟಗಾರಿಕೆ ರೈತ, ರೈತ ಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನ

ರಾಯಚೂರು ಅ.23

ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ಡಿಸೆಂಬರ್ 23 ರಿಂದ 25ರವರೆಗೆ ಬಾಗಲಕೋಟೆಯ ಉದ್ಯಾನಗಿರಿಯ ಮುಖ್ಯ ಅವರಣದಲ್ಲಿ ಹವಾಮಾನ ವೈಪರಿತ್ಯದಲ್ಲಿ ಸುಸ್ಥಿರ ತೋಟಗಾರಿಕೆ ಎಂಬ ಧ್ಯೇಯದೊಂದಿಗೆ ತೋಟಗಾರಿಕೆ ಮೇಳ -2026ವನ್ನು ಹಮ್ಮಿಕೊಳ್ಳಲಾಗಿದೆ.

ಸದರಿ ತೋಟಗಾರಿಕೆ ಮೇಳದಲ್ಲಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆಯ ವ್ಯಾಪ್ತಿಯಲ್ಲಿ ಬರುವ ರಾಜ್ಯದ 25 ಜಿಲ್ಲೆಗಳಲ್ಲಿ ಪ್ರತಿ ಜಿಲ್ಲೆಗೆ ಒಬ್ಬ ಶ್ರೇಷ್ಠ ತೋಟಗಾರಿಕೆ ರೈತ/ರೈತ ಮಹಿಳೆ ಆಯ್ಕೆ ಮಾಡಿ ಸೂಕ್ತ ಬಹುಮಾನದೊಂದಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಗುವುದು.

ಈ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸಲು ಬಯಸುವ ರಾಯಚೂರು ಜಿಲ್ಲೆಯ ತೋಟಗಾರಿಕೆ ರೈತ/ರೈತ ಮಹಿಳೆಯರು ಅರ್ಜಿ ನಮೂನೆಯನ್ನು ಈ ಕೆಳಗೆ ತಿಳಿಸಿದ ವಿಳಾಸದಿಂದ ಅಥವಾ ತೋ.ವಿ.ವಿ. ಯ ವೆಬ್‌ಸೈಟ್ : ತಿತಿತಿ.ಚಿಚಿಟಇಣ.ಇಚಿಡ..ಟ ಮೂಲಕ ಪಡೆದುಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಗಳನ್ನು 2026ರ ನವೆಂಬರ್ 05ರ ಸಂಜೆ 5ರೊಳಗಾಗಿ ಡೀನ್, ತೋಟಗಾರಿಕೆ ಮಹಾವಿದ್ಯಾಲಯ, ಹುಲಿಗಿ ಕ್ರಾಸ್, ಎನ್ ಹೆಚ್-50 ಹೊಸ ಲಿಂಗಪುರ, ಮುನಿರಾಬಾದ್-583 233 ಕೊಪ್ಪಳ ತಾಲೂಕು ಮತ್ತು ಜಿಲ್ಲೆ ಇವರಿಗೆ ಸಲ್ಲಿಸುವುದು.

ಹೆಚ್ಚಿನ ವಿವರಗಳಿಗೆ 9480696399 / 8147706739ಗೆ ಸಂಪರ್ಕ ಮಾಡಬಹುದಾಗಿದೆ ಎಂದು ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR